ವಿಜಯಪುರ | ಸಂಪುಟ 02 | ಸಂಚಿಕೆ 48 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ಬುಧವಾರ, ಏಪ್ರಿಲ್ 10, 2024

"ಸ್ವಚ್ಛತೆ ಎಂಬುದು ನಾಗರೀಕ ಜೀವನದ ಮೊದಲ ಆದ್ಯತೆಯಾಗಿರಬೇಕು. ನಾವು ವಾಸಿಸುವ ಸ್ಥಳವನ್ನು ಶುಚಿಯಾಗಿ ಇಟ್ಟುಕೊಂಡರೆ ಸ್ವಚ್ಛ ಭಾರತದ ಪರಿಕಲ್ಪನೆ ಸಾಕಾರವಾಗುತ್ತದೆ. ಹಾಗಾಗಿ ಪ್ರತಿ ತಿಂಗಳ ಮೊದಲ ಶನಿವಾರವನ್ನು 'ಸ್ವಚ್ಛ ಶನಿವಾರ' ಎಂಬ ಪರಿಕಲ್ಪನೆ ಹಮ್ಮಿಕೊಂಡಿದ್ದೇವೆ."




– ರಿಶಿ ಆನಂದ
ವಿಜಯಪುರ ಜಿಪಂ ಸಿಇಓ

## ಇಡಿ ಬಂಧನ ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿ । ಸುಪ್ರೀಂಕೋರ್ಟ್ ಮೊರೆಗೆ ಮುಂದಾದ ಆಪ್ । ರೂ.600 ಕೋಟಿ ಹಗರಣದ ಪ್ರಕರಣ

# ಕೇಜ್ರಿವಾಲ್ ಬಂಧನ ಎತ್ತಿಹಿಡಿದ ಹೈಕೋರ್ಟ್!

ದೆಹಲಿ: ಆಪಾದಿತ ಮದ್ಯ ನೀತಿ ಹಗರಣದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ (ಇಡಿ) ತನ್ನನ್ನು ಬಂಧಿಸಿರುವುದನ್ನು ಪ್ರಶ್ನಿಸಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಸಲ್ಲಿಸಿದ್ದ ಅರ್ಜಿಯನ್ನು ದೆಹಲಿ ಹೈಕೋರ್ಟ್ ಮಂಗಳವಾರ ತಿರಸ್ಕರಿಸಿದೆ. ಹೈಕೋರ್ಟ್ ಆದೇಶದ ವಿರುದ್ಧ ಕೇಜ್ರಿವಾಲ್ ಸುಪ್ರೀಂ ಕೋರ್ಟ್ ಮೆಟ್ಟಿಲೇರಲಿದ್ದಾರೆ ಎಂದು ಎಎಪಿ ಮೂಲಗಳು ತಿಳಿಸಿವೆ.

ಕೇಜ್ರಿವಾಲ್ ಅರ್ಜಿ ವಿಚಾರಣೆ ನಡೆಸಿದ್ದ ನ್ಯಾಯಮೂರ್ತಿ ಸ್ವರಣಾ ಕಾಂತ ಶರ್ಮಾ ಅವರು, ಏಪ್ರಿಲ್ 3 ರಂದು ತೀರ್ಪನ್ನು ಕಾಯ್ದಿರಿಸಿದರು.

ಕೇಜ್ರಿವಾಲ್ ಅವರನ್ನು ನ್ಯಾಯಾಂಗ ಬಂಧನಕ್ಕೆ ಕಳುಹಿಸಿದ ಆದೇಶ ಸೇರಿದಂತೆ ವಿಚಾರಣಾ ನ್ಯಾಯಾಲಯದ ನಂತರದ ರಿಮಾಂಡ್ ಆದೇಶಗಳನ್ನು ನ್ಯಾಯಾಲಯ ಎತ್ತಿಹಿಡಿದಿದೆ.

ಬಿಜೆಪಿಯ ನಿಯಂತ್ರಣದಲ್ಲಿರುವ ಕೇಂದ್ರ ಸರ್ಕಾರವು ರಾಜಕೀಯ ವಿರೋಧಿಗಳನ್ನು ಹತ್ತಿಕ್ಕಲು ಜಾರಿ ನಿರ್ದೇಶನಾಲಯವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂಬ ಕೇಜ್ರಿವಾಲ್ ಅವರ ವಾದವನ್ನು ಒಪ್ಪಿಕೊಳ್ಳಲು ನ್ಯಾಯಾಧೀಶರು ನಿರಾಕರಿಸಿದ್ದಾರೆ.

"ನ್ಯಾಯಾಧೀಶರು ಕಾನೂನಿಗೆ ಬದ್ಧರಾಗಿರುತ್ತಾರೆಯೇ ವಿನಃ, ರಾಜಕೀಯಕ್ಕಲ್ಲ. ಕಾನೂನು ತತ್ವಗಳ ಮೇಲೆ ತೀರ್ಪುಗಳನ್ನು ನೀಡಲಾಗುತ್ತದೆಯೇ ಹೊರತು, ರಾಜಕೀಯ ಪರಿಗಣನೆಗಳಿಗೆ ಅಲ್ಲ. ರಾಜಕೀಯ ಪರಿಗಣನೆಗಳು ಸಂಬಂಧವಿಲ್ಲದ ಕಾರಣ ನ್ಯಾಯಾಲಯದ ಮುಂದೆ ತರಲು ಸಾಧ್ಯವಿಲ್ಲ," ಎಂದು ನ್ಯಾಯಾಧೀಶರು ಹೇಳಿದ್ದಾರೆ. ಇಡಿಯನ್ನು ಬಿಜೆಪಿಯ ಸಂಸ್ಥೆಯಾಗಿ ನೋಡಲು ಸಾಧ್ಯವಿಲ್ಲ ಎಂದಿದ್ದಾರೆ.



"ಪ್ರಸ್ತುತ ಪ್ರಕರಣವು ಕೇಂದ್ರ ಸರ್ಕಾರ ಮತ್ತು ಕೇಜ್ರಿವಾಲ್ ನಡುವಿನ ಪ್ರಕರಣವಲ್ಲ. ಕೇಜ್ರಿವಾಲ್ ಮತ್ತು ಇಡಿ ನಡುವಿನ ಪ್ರಕರಣವಾಗಿದೆ. ಯಾವುದೇ ಬಾಹ್ಯ ಅಂಶಗಳಿಂದ ಪ್ರಭಾವಿತವಾಗದಂತೆ ನ್ಯಾಯಾಲಯವು ಜಾಗರೂಕವಾಗಿರಬೇಕು" ಎಂದು ನ್ಯಾಯಾಧೀಶರು ಹೇಳಿದ್ದಾರೆ.

ಅನುಮೋದಕರಾದ ರಾಘವ್ ಮಾಗುಂಟಾ ಮತ್ತು ಶರತ್ ರೆಡ್ಡಿ ಅವರ ಹೇಳಿಕೆಗಳನ್ನು ನ್ಯಾಯಾಲಯದ ಮುಂದೆ ದಾಖಲಿಸಲಾಗಿದೆ ಎಂದು ನ್ಯಾಯಾಲಯವು ಗಮನಿಸಿದೆ. ಅವು ವಿಶ್ವಾಸಾರ್ಹವಲ್ಲ ಎಂಬ ಕೇಜ್ರಿವಾಲ್ ಅವರ ವಾದವನ್ನು ತಳ್ಳಿ ಹಾಕಿದೆ.

ಹೇಳಿಕೆಗಳು ವಿಶ್ವಾಸಾರ್ಹವಾಗಿವೆಯೇ? ಮೇಲಿನ ವ್ಯಕ್ತಿಗಳು ತಮ್ಮ ನಿಲುವನ್ನು ಏಕೆ ಬದಲಾಯಿಸುತ್ತಿದ್ದಾರೆ? ಎಂಬುದು ಈ ಹಂತದಲ್ಲಿ ಹೈಕೋರ್ಟ್‌ನಲ್ಲಿ ಪರಿಶೀಲಿಸಬಹುದಾದ ವಿಷಯವಲ್ಲ. ಇದನ್ನು ವಿಚಾರಣಾ ನ್ಯಾಯಾಲಯವು ನಿರ್ಧರಿಸುತ್ತದೆ ಎಂದು ನ್ಯಾಯಾಲಯ ಹೇಳಿದೆ.

ನ್ಯಾಯಾಲಯವು ಸಾಮಾನ್ಯ ವ್ಯಕ್ತಿಗಳಿಗೆ ಪ್ರತ್ಯೇಕ ಕಾನೂನು ಮತ್ತು ಉನ್ನತ ವ್ಯಕ್ತಿಗಳಿಗೆ ಮತ್ತೊಂದು ಕಾನೂನುಗಳನ್ನು ರೂಪಿಸಲು ಸಾಧ್ಯವಿಲ್ಲ ಎಂದಿದೆ.

ಹೈಕೋರ್ಟ್ ಆದೇಶದ ವಿರುದ್ಧ ಆಮ್ ಆದ್ಮಿ ಪಕ್ಷ ಶೀಘ್ರದಲ್ಲೇ ಸುಪ್ರೀಂ ಕೋರ್ಟ್ ಮೆಟ್ಟಿಲೇರಲಿದೆ ಎಂದು ತಿಳಿದು ಬಂದಿದೆ.

2021-22ರ ದೆಹಲಿ ಅಬಕಾರಿ ನೀತಿ ಒಳಗೊಂಡ 600 ಕೋಟಿ ರೂಪಾಯಿ ಹಗರಣಕ್ಕೆ ಸಂಬಂಧಿಸಿದಂತೆ ಕೇಜ್ರಿವಾಲ್ ಅವರನ್ನು ಮಾರ್ಚ್ 21 ರಂದು ಇಡಿ ಬಂಧಿಸಿತ್ತು.

## ರಾಜ ನುಡಿ

ಹುಟ್ಟು ಮತ್ತು ಸಾವುಗಳು ಪರ್ಯಾಯವೇ ಇಲ್ಲದ ಪರಮಾತ್ಮನ ಪರಮ ವಿಸ್ಮಯಗಳು. ಇವು ಬೇವು-ಬೆಲ್ಲದಂತೆ, ಬದುಕಿನ ಸಿಹಿ ಹಾಗೂ ಕಹಿಗಳನ್ನು ಸಂಕೇತಿಸುತ್ತವೆ. ಹೀಗಾಗಿ ಎರಡನ್ನೂ ಒಟ್ಟಾಗಿ ಸ್ವೀಕರಿಸಿ ಪರ್ಯಾಯವಿಲ್ಲದ ಪರಮಾತ್ಮನ ವಿಸ್ಮಯಗಳನ್ನು ಮೀರೋಣ.

–ಡಾ. ರಾಜಶೇಖರ ನಾಗೂರ

## ವಚನ ಚಿಂತನ 351

*ಎನ್ನಂತರಂಗದ ಜ್ಯೋತಿಯೆ ಬಸವಣ್ಣನಯ್ಯಾ,*
*ಎನ್ನ ಬಹಿರಂಗದ ಜ್ಯೋತಿಯೆ ಚೆನ್ನಬಸವಣ್ಣನಯ್ಯಾ,*
*ಎನ್ನ ಸರ್ವಾಂಗದ ಜ್ಯೋತಿಯೆ ಪ್ರಭುದೇವನಯ್ಯಾ,*
*ಇಂತಿವರ ಶ್ರೀಪಾದದಲ್ಲಿ ಉರಿ ಕರ್ಪುರ ಸಂಯೋಗದಂತೆಬೆರೆಸಿದೆನಯ್ಯಾ ಉಳಿಯುಮೇಶ್ವರಾ.*

ಅಂದಿನ ಕಲ್ಯಾಣದಲ್ಲಿನ ಎಲ್ಲ ಶರಣರಿಗೆ ಬಸವಣ್ಣನವರು ಚನ್ನಬಸವಣ್ಣನವರು ಹಾಗೂ ಅಲ್ಲಮಪ್ರಭುಗಳು ಕ್ರಮವಾಗಿ ಅರಿವು, ಆಚಾರ, ಅನುಭಾವಕ್ಕೆ ಮಾದರಿಯಾಗಿದ್ದರು ಆ ಕಾರಣಕ್ಕಾಗಿ ಇಲ್ಲಿ ಉಳಿಯುಮೇಶ್ವರ ಚಿಕ್ಕಣ್ಣನವರು ತಮ್ಮ ಅಂತರಂಗದ ಜ್ಯೋತಿಯಾಗಿ ಬಸವಣ್ಣನವರನ್ನು ಬಹಿರಂಗದ ಜ್ಯೋತಿಯಾಗಿ ಚೆನ್ನಬಸವಣ್ಣನವರನ್ನು ಹಾಗೂ ಸರ್ವಾಂಗಜ್ಯೋತಿಯಾಗಿ ಪ್ರಭುದೇವರನ್ನು ಗುರುತಿಸಿದ್ದಾರೆ. ಈ ಮೂವರನ್ನು ಕೆಲವು ಶರಣರು ಗುರು ಲಿಂಗ ಜಂಗಮದ ರೂಪದಲ್ಲಿ ಕಂಡು ಗೌರವಿಸಿದ್ದಾರೆ. ಹೀಗೆ ಅಂದು ಕಲ್ಯಾಣಕ್ಕೆ ಬಂದ ಅಕ್ಕಮಹಾದೇವಿಯವರು ಇವರುಗಳ ಬಗ್ಗೆ ಹೀಗೆ ಹೇಳಿಕೊಂಡಿದ್ದಾರೆ "ಬಸವಣ್ಣನ ಭಕ್ತಿ, ಚೆನ್ನಬಸವಣ್ಣನ ಜ್ಞಾನ, ಮಡಿವಾಳಯ್ಯನ ನಿಷ್ಠೆ, ಪ್ರಭುದೇವರ ಜಂಗಮಸ್ಥಲ, ಅಜಗಣ್ಣನ ಐಕ್ಯಸ್ಥಲ, ನಿಜ ಗುಣನ ಆರೂಢಸ್ಥಲ, ಸಿದ್ಧರಾಮಯ್ಯನ ಸಮಾಧಿ ಸ್ಥಲ. ಇಂತಿವರ ಕರುಣಪ್ರಸಾದ ಎನಗಾಯಿತ್ತು ಚೆನ್ನಮಲ್ಲಿ ಕಾರ್ಜುನಯ್ಯಾ. "ಮಡಿವಾಳ ಮಾಚಿದೇವನವರು ಈ ಮೂವರ ಸೇವೆಗೆ ತಾವು ಸದಾ ಸಿದ್ಧರಾಗಿರುವುದಾಗಿ ಗೌರವಿಸಿದ್ದಾರೆ. ಬಸವಣ್ಣಾ ಎಂದಡೆ, ಚೆನ್ನಬಸವಣ್ಣಾ ಎಂದಡೆ, ಪ್ರಭುದೇವಾ ಎಂದಡೆ, ಮಹಾದೇವಾ ಎಂದಡೆ, ಮಹಾಸ್ಥಾನದಲ್ಲಿರ್ದು ಕರೆದಡೆ, ಓ ಎನುತಿರ್ದ ಕಾಣಾ, ಕಲಿದೇವರದೇವಾ. ಒಂದೇ ಕಾಲದಲ್ಲಿ ಒಂದೇ ಕಾರ್ಯಕ್ಕೆ ಯಾವುದೇ ಭೇದಭಾವವಿಲ್ಲದೆ ಇಷ್ಟೊಂದು ಅನ್ಯೋನ್ಯತೆಯಿಂದ ದಾರ್ಶನಿಕರು ಒಂದುಗೂಡಿ ಪರಸ್ಪರ ಗೌರವಿಸಿರುವುದು ಕಲ್ಯಾಣದ ಬಸವಾದಿ ಶರಣರನ್ನು ಹೊರತುಪಡಿಸಿ ಜಗತ್ತಿನ ಮತ್ತಾವ ಭಾಗದಲ್ಲಿ ಕಾಣಿಸಿಕೊಂಡಿಲ್ಲ. ಇದು ಶರಣರ ವೈಶಿಷ್ಟ್ಯ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಸುಪ್ರೀಂ ಕೋರ್ಟ್ ಗೆ 'ಬೇಷರತ್ ಕ್ಷಮೆ' ಕೇಳಿದ ಬಾಬಾ ರಾಮದೇವ್!

**ಉದಯರಶ್ಮಿ ನ್ಯೂಸ್**

ನವದೆಹಲಿ: ಪತಂಜಲಿ ಉತ್ಪನ್ನಗಳ ದಾರಿತಪ್ಪಿಸುವ ಜಾಹಿರಾತು ಪ್ರಕರಣಕ್ಕೆ ಸಂಬಂಧಿಸಿದಂತೆ ಖ್ಯಾತ ಯೋಗಗುರು ಬಾಬಾ ರಾಮ್ ದೇವ್ ಮತ್ತು ಆಚಾರ್ಯ ಬಾಲಕೃಷ್ಣ ಮಂಗಳವಾರ ಸುಪ್ರೀಂ ಕೋರ್ಟ್ ಗೆ 'ಬೇಷರತ್ ಕ್ಷಮೆ' ಕೇಳಿದ್ದಾರೆ.

ಈ ಹಿಂದೆ ಯೋಗ ಗುರು ಬಾಬಾ ರಾಮ್‌ದೇವ್ ಮತ್ತು ಪತಂಜಲಿ ಆಯುರ್ವೇದ ವ್ಯವಸ್ಥಾಪಕ ನಿರ್ದೇಶಕ (ಒಆ) ಆಚಾರ್ಯ ಬಾಲಕೃಷ್ಣ ಅವರು ಸಲ್ಲಿಕೆ ಮಾಡಿದ್ದ ಅಸ್ಪಷ್ಟ ಮತ್ತು ಅಸಂಬದ್ಧ ಅಫಿಡವಿಟ್ ಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಕೆಂಡಾಮಂಡಲವಾಗಿತ್ತು. ಅಂದಿನ ವಿಚಾರಣೆಯಲ್ಲಿ ಸುಪ್ರೀಂ ಕೋರ್ಟ್ ಇಬ್ಬರಿಗೂ ಛೀಮಾರಿ ಹಾಕಿ ಸೂಕ್ತ ಪ್ರತಿಕ್ರಿಯೆಗಳನ್ನು ಸಲ್ಲಿಸಲು ಮತ್ತೊಂದು ಕೊನೆಯ ಅವಕಾಶವನ್ನು ನೀಡಿ ವಿಚಾರಣೆಯನ್ನು ಮುಂದೂಡಿತ್ತು.

ಇದೀಗ ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ನೀಡಿದ ಭರವಸೆಯನ್ನು ಪಾಲಿಸದಿದ್ದಕ್ಕಾಗಿ ಸುಪ್ರಿಂ ಕೋರ್ಟ್ ಮುಂದೆ ಯೋಗ ಗುರು ಬಾಬಾ ರಾಮ್ ದೇವ್ ಮತು ಆಚಾರ್ಯ ಬಾಲಕೃಷ್ಣ



ಬೇಷರತ್ ಕ್ಷಮೆಯಾಚಿಸಿದ್ದಾರೆ. ಕ್ಷಮೆಯಾಚನೆಯನ್ನು ಶನಿವಾರವೇ ಸಲ್ಲಿಸಲಾಗಿದ್ದು, ಸುಪ್ರೀಂ ಕೋರ್ಟ್ ಈ ವಿಷಯವನ್ನು ನಾಳೆ ಮತ್ತೆ ವಿಚಾರಣೆಗೆ ತೆಗೆದುಕೊಳ್ಳಲಿದೆ ಎಂದು ಹೇಳಲಾಗಿದೆ.

**ಖುದ್ದು ಹಾಜರಾತಿಗೆ ಸೂಚನೆ**

ಇನ್ನು ನಾಳಿನ ವಿಚಾರಣೆಗೂ ಯೋಗ ಗುರು ಬಾಬಾ ರಾಮ್ ದೇವ್ ಮತ್ತು ಆಚಾರ್ಯ ಬಾಲಕೃಷ್ಣ ಅವರನ್ನು ವಿಚಾರಣೆಗೆ ಹಾಜರಾಗುವಂತೆ ಕೇಳಲಾಗಿದೆ.

# ಇಂದು ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟ

**ಉದಯರಶ್ಮಿ ನ್ಯೂಸ್**

ಬೆಂಗಳೂರು: ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶವನ್ನು ಬುಧವಾರ ಬೆಳಗ್ಗೆ 10 ಗಂಟೆಗೆ ಪ್ರಕಟಿಸಲಾಗುವುದು ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಮಂಗಳವಾರ ತಿಳಿಸಿದೆ.

ಮಾರ್ಚ್ 1ರಿಂದ ಮಾರ್ಚ್ 22ರವರೆಗೆ ನಡೆದಿದ್ದ ದ್ವಿತೀಯ ಪಿಯುಸಿ ಪರೀಕ್ಷೆ ಫಲಿತಾಂಶವನ್ನು ನಾಳೆ ಪ್ರಕಟಿಸಲಾಗುತ್ತಿದೆ. ಬೆಳಗ್ಗೆ 10 ಗಂಟೆಗೆ ಸುದ್ದಿಗೋಷ್ಠಿ ನಡೆಯಲಿದ್ದು,

ಬಳಿಕ 11 ಗಂಟೆಗೆ ವೆಬ್‌ಸೈಟ್‌ನಲ್ಲಿ ವಿಜ್ಞಾನ, ವಾಣಿಜ್ಯ, ಕಲೆ ವಿಭಾಗ ಸೇರಿದಂತೆ ಎಲ್ಲಾ ವಿಭಾಗಗಳ ಫಲಿತಾಂಶವನ್ನು ಏಕಕಾಲದಲ್ಲಿ ಪ್ರಕಟಿಸಲಾಗುತ್ತಿದೆ ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ.




ಫಲಿತಾಂಶವನ್ನು karresults.nic.in ಅಥವಾ pue.kar.nic ಅಧಿಕೃತ ವೆಬ್ ಸೈಟ್ ನಲ್ಲಿ ನಾಳೆ ಬೆಳಗ್ಗೆ 11 ಗಂಟೆಯ ನಂತರ ವೀಕ್ಷಿಸಬಹುದು.

2024ರ ದ್ವಿತೀಯ ಪಿಯುಸಿ ಪರೀಕ್ಷೆಗೆ 6.9 ಲಕ್ಷ ವಿದ್ಯಾರ್ಥಿಗಳು ಹಾಜರಾಗಿದ್ದಾರೆ ಎಂದು ಅಂದಾಜಿಸಲಾಗಿದೆ. ಅವರಲ್ಲಿ 3.3 ಲಕ್ಷ ವಿದ್ಯಾರ್ಥಿಗಳಾಗಿದ್ದು, 3.6 ಲಕ್ಷ ವಿದ್ಯಾರ್ಥಿನಿಯರಾಗಿದ್ದರು.

# ಕೇಂದ್ರ ಮಾಜಿ ಸಚಿವ ಬಿರೇಂದರ್ ಸಿಂಗ್ ಕಾಂಗ್ರೆಸ್ ಸೇರ್ಪಡೆ

ದೆಹಲಿ: ಮಾಜಿ ಕೇಂದ್ರ ಸಚಿವ ಚೌಧರಿ ಬಿರೇಂದರ್ ಸಿಂಗ್ ಮತ್ತು ಅವರ ಪತ್ನಿ ಪ್ರೇಮಲತಾ ಸಿಂಗ್ ಬಿಜೆಪಿ ತೊರೆದು ಕಾಂಗ್ರೆಸ್ ಸೇರ್ಪಡೆಯಾಗಿದ್ದಾರೆ.

ಬಿರೇಂದರ್ ಸಿಂಗ್ ಅವರ ಪುತ್ರ ಹಾಗೂ ಬಿಜೆಪಿಯ ಮಾಜಿ ನಾಯಕ ಬ್ರಿಜೇಂದ್ರ ಸಿಂಗ್ ಇತ್ತೀಚೆಗಷ್ಟೇ ಕಾಂಗ್ರೆಸ್ ಸೇರಿದ್ದರು. ಪ್ರೇಮಲತಾ ಸಿಂಗ್ ಹರಿಯಾಣದ ಮಾಜಿ ಬಿಜೆಪಿ ಶಾಸಕರಾಗಿದ್ದರೆ, ಬಿರೇಂದರ್ ಸಿಂಗ್ ಮೊದಲ ಮೋದಿ ಸಂಪುಟದಲ್ಲಿ ಕೇಂದ್ರ ಸಚಿವರಾಗಿ ಸೇವೆ ಸಲ್ಲಿಸಿದ್ದರು.

ನಾಲ್ಕು ದಶಕಗಳ ಕಾಲ ಕಾಂಗ್ರೆಸ್‌ನಲ್ಲಿದ್ದ ಬಿರೇಂದರ್ ಸಿಂಗ್ ಅವರು ಸುಮಾರು 10 ವರ್ಷಗಳ ಹಿಂದೆ ಬಿಜೆಪಿಗೆ ಸೇರಿದ್ದರು. ಮಾರ್ಚ್ 10 ರಂದು ಅವರ ಮಗ ಕಾಂಗ್ರೆಸ್ ಸೇರಿದ ನಂತರ, ಬಿರೇಂದರ್ ಸಿಂಗ್ ಕೂಡ ಕಾಂಗ್ರೆಸ್‌ಗೆ ಮರಳಲಿದ್ದಾರೆ ಎಂಬ ಸುದ್ದಿ ಹಬ್ಬಿತ್ತು.

ಕಾಂಗ್ರೆಸ್‌ಗೆ ಮರಳಿರುವ ಕುರಿತು ಕೇಳಿದ್ದಕ್ಕೆ ಉತ್ತರಿಸಿದ ಬಿರೇಂದರ್ ಸಿಂಗ್, "ನಾನು 42 ವರ್ಷಗಳ ಕಾಲ ಕಾಂಗ್ರೆಸ್‌ನಲ್ಲಿದ್ದೆ. ಕೆಲವು ಕಾರಣಾಂತರಗಳಿಂದ 2014ರಲ್ಲಿ ಬಿಜೆಪಿ ಸೇರಿದೆ. ಬಿಜೆಪಿ ಸೇರಿದ ಬಳಿಕ ಎರಡು ಪಕ್ಷಗಳ ನಡುವಿನ ಸಿದ್ಧಾಂತ ನನಗೆ ವಿಭಿನ್ನವಾಗಿ ಕಂಡವು. ಕಾಂಗ್ರೆಸ್-ಬಿಜೆಪಿ ಸಿದ್ಧಾಂತಗಳ ನಡುವೆ ವ್ಯತ್ಯಾಸವಿದೆ, ಅಂತರವಿದೆ. ಇದನ್ನು ನಾನು ಅನುಭವಿಸಿದ್ದೇನೆ. ಈ ಹಿನ್ನೆಲೆ ಮತ್ತೆ ಕಾಂಗ್ರೆಸ್‌ಗೆ ಮರಳಿದ್ದೇನೆ ಎಂದು ಹೇಳಿದ್ದಾರೆ.



## ಕಾಂಗ್ರೆಸ್ ಪಕ್ಷದ ಜಿಲ್ಲಾ ಅಧ್ಯಕ್ಷ ಸ್ಥಾನ ವಹಿಸಿಕೊಂಡ ಮಲ್ಲಿಕಾರ್ಜುನ ಲೋಣಿ ಭವಿಷ್ಯ

# ಎರಡು ಲಕ್ಷ ಮತಗಳ ಅಂತರದಿಂದ ಆಲಗೂರ ದಿಗ್ವಿಜಯ!

**ಉದಯರಶ್ಮಿ ನ್ಯೂಸ್**

ವಿಜಯಪುರ: ಎರಡು ಲಕ್ಷಕ್ಕೂ ಅಧಿಕ ಮತಗಳ ಅಂತರದಿಂದ ಕಾಂಗ್ರೆಸ್‌ನ ಲೋಕಸಭೆ ಅಭ್ಯರ್ಥಿ ರಾಜು ಆಲಗೂರ ಗೆಲ್ಲಲಿದ್ದಾರೆ ಎಂದು ಮಲ್ಲಿಕಾರ್ಜುನ ಲೋಣಿ ವಿಶ್ವಾಸ ವ್ಯಕ್ತಪಡಿಸಿದರು.

ನಗರದ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ಪಕ್ಷದ ಜಿಲ್ಲಾ ಅಧ್ಯಕ್ಷ ಸ್ಥಾನ ವಹಿಸಿಕೊಂಡು ಅವರು ಮಾತನಾಡಿದರು.

ಮುಖಂಡರು, ಕಾರ್ಯಕರ್ತರು ಈ ಲೋಕಸಭೆ ಚುನಾವಣೆಯನ್ನು ಸವಾಲಾಗಿ ಸ್ವೀಕರಿಸಿದ್ದಾರೆ. ತಮ್ಮ ಮೇಲೆ ವಿಶ್ವಾಸವಿಟ್ಟು, ಪಕ್ಷ ಈ ಮಹತ್ತರ ಜವಾಬ್ದಾರಿ ನೀಡಿದೆ. ಇದಕ್ಕೆ ಬದ್ಧವಾಗಿ ಶ್ರಮವಹಿಸಿ ಸಂಘಟನೆಯಲ್ಲಿ ತೊಡಗುವೆ. ರಾಜ್ಯದಲ್ಲಿ ಕಾಂಗ್ರೆಸ್ ಉತ್ತಮ ಆಡಳಿತ ನಡೆಸಿ, ಜನಾನುರಾಗಿಯಾಗಿದೆ. ಇದನ್ನು ಜನರಿಗೆ ನಮ್ಮ ಕಾರ್ಯಕರ್ತರು ತಿಳಿಸಬೇಕು ಎಂದರು.

ನಮ್ಮ ಪಕ್ಷದ ಲೋಕಸಭೆ ಅಭ್ಯರ್ಥಿ ಆಲಗೂರರು ಪ್ರಬುದ್ಧರಾಗಿದ್ದಾರೆ. ಇಷ್ಟು ದಿನ ಅವಿರತ ಶ್ರಮದಿಂದ ಪಕ್ಷವನ್ನು ಕಟ್ಟಿ ಬೆಳೆಸಿದ್ದಾರೆ. ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡಿದ್ದಾರೆ. ಅವರಂತೆ ತಾವು ಕೂಡ ಪಕ್ಷದ ಏಳ್ಗೆಗೆ ಶ್ರಮಿಸುವೆ ಎಂದು ಹೇಳಿದ ಲೋಣಿ, ಆಲಗೂರರ ಗೆಲುವು ನೂರಕ್ಕೆ ನೂರು ನಿಶ್ಚಿತವಾಗಿದೆ. ನಾವೆಲ್ಲ ಕಷ್ಟಪಟ್ಟರೆ ಎರಡು ಲಕ್ಷ ಮತಗಳಿಂದ ಅವರನ್ನು ಗೆಲ್ಲಿಸಬಹುದು ಎಂದು ಹೇಳಿದರು.




ಕಾಂಗ್ರೆಸ್ ಅಭ್ಯರ್ಥಿ ರಾಜು ಆಲಗೂರ ಮಾತನಾಡಿ, ಲೋಣಿಯವರ ನೇಮಕದಿಂದ ಪಕ್ಷ ಸಂಘಟನೆಗೆ ಇನ್ನಷ್ಟು ಶಕ್ತಿ ಬರಲಿದೆ. ಈ ಚುನಾವಣೆಯನ್ನು ಎಲ್ಲರೂ ಒಟ್ಟಾಗಿ ಎದುರಿಸಬೇಕು. ಬಿಜೆಪಿಯ ಸುಳ್ಳುಗಳನ್ನು ಜನರಿಗೆ ಮನದಟ್ಟು ಮಾಡಿಸಬೇಕು ಎಂದರು.

ಸಿದ್ದರಾಮಯ್ಯರ ನೇತೃತ್ವದ ಕಾಂಗ್ರೆಸ್ ಸರಕಾರ ಗ್ಯಾರಂಟಿಗಳ ಮೂಲಕ ಜನಸಾಮಾನ್ಯರ ಮನ ಮುಟ್ಟಿದೆ, ಅವರ ಹೃದಯ ಗೆದ್ದಿದೆ. ಈ ಬಾರಿಯ ಲೋಕಸಭೆಯ ಚುನಾವಣೆಯಲ್ಲಿ ಪಕ್ಷ ಕೇಂದ್ರದಲ್ಲೂ ಅಧಿಕಾರ ಹಿಡಿಯಲಿದೆ ಎಂದು ಭರವಸೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಶಾಸಕ ವಿಠ್ಠಲ ಕಟಕದೊಂಡ, ಕಾಂಗ್ರೆಸ್ ಮುಖಂಡರಾದ ಎಂ.ಆರ್. ಪಾಟೀಲ, ಮುಖಂಡರಾದ ಹಮೀದ್ ಮುಶ್ರೀಫ್, ಗಂಗಾಧರ ಸಂಬಣ್ಣಿ, ಚಾಂದಸಾಬ ಗಡಗಲಾವ, ವೈಜನಾಥ ಕರ್ಪೂರಮಠ, ಸುಭಾಷ ಕಾಲೇಬಾಗ, ಚಂದ್ರಕಾಂತ ಶೆಟ್ಟಿ, ಮಹ್ಮದರಫೀಕ ಟಪಾಲ, ಆಜಾದ ಪಟೇಲ, ಮಹಾದೇವಿ ಕನ್ನಾನ ಮುಶ್ರೀಫ್, ಉಪಮೇಯರ್ ದಿನೇಶ ಹಳ್ಳಿ, ಸ್ನೇಹಾ ಕಟ್ಟಿ, ವಿದ್ಯಾವತಿ ಅಂಕಲಗಿ, ಶಬ್ಬೀರ ಜಾಗಿರದಾರ, ಸಾಹೇಬಗೌಡ ಬಿರಾದಾರ, ಸುರೇಶ ಗೊಣಸಗಿ, ವಿಜಯಕುಮಾರ ಘಾಟಗೆ, ಐ.ಎಂ. ಇಂಡಿಕರ, ವಸಂತ ಹೊನಮೊಡೆ, ಜಾಕಿರ ಮುಲ್ಲಾ, ಹಾಜಿಲಾಲ ದಳವಾಯಿ, ಚನಬಸಪ್ಪ ನಂದರಗಿ, ಅಷ್ಫಾಕ ಮನಗೂಳಿ, ಅಮಿತ ಚವ್ಹಾಣ, ರಮೇಶ ಗುಬ್ಬೇವಾಡ, ನಿಂಗಪ್ಪ ಸಂಗಾಪೂರ, ರಾಜೇಶ್ವರಿ ಚೋಳಕೆ, ಬಾಪುಗೌಡ ಪಾಟೀಲ, ಶಂಕರಸಿಂಗ ಹಜೇರಿ, ಸುಭಾಷ ಗುಡಿಮನಿ, ಆನಂದ ಜಾಧವ, ಮಹ್ಮದಹನೀಫ್ ಮಕಾನದಾರ, ಬ್ಲಾಕ್ ಅಧ್ಯಕ್ಷರುಗಳಾದ ಆರತಿ ಶಹಾಪೂರ, ಗುರು ತಾರನಾಳ, ಜಾವಿದ ಮೊಮಿನ, ಗೋಕಾಕ, ಎಸ್.ಎಂ. ಪಾಟೀಲ ಗಣಿಹಾರ, ಸೋಮನಾಥ ಕಳ್ಳಿಮನಿ, ಬಿಡಿಎ ಅಧ್ಯಕ್ಷ ಸಂತೋಷ ಬಾಲಗಾಂವಿ, ಶ್ರೀದೇವಿ ಉತ್ಸಲಾರ ಅನೇಕರಿದ್ದರು.

### ಬೇವು-ಬೆಲ್ಲ ನೀಡಿ ಅಧಿಕಾರ ಹಸ್ತಾಂತರ..

'ಹೊಸ ಶಕ್ತಿ ಬಂದಿದೆ, ಲಕ್ಷ ಮತಗಳ ಅಂತರದಿಂದ ಗೆಲ್ಲುವೆ. ಇಷ್ಟು ದಿನಗಳ ಸಹಕಾರಕ್ಕೆ ಧನ್ಯವಾದ' ಎಂದು ಹೇಳುತ್ತ ರಾಜು ಆಲಗೂರ್ ಅವರು ಯುಗಾದಿಯ ಬೇವು-ಬೆಲ್ಲವನ್ನು ನೀಡಿ ಮಲ್ಲಿಕಾರ್ಜುನ ಲೋಣಿಯವರಿಗೆ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸ್ಥಾನದ ಅಧಿಕಾರವನ್ನು ಹಸ್ತಾಂತರಿಸಿದ್ದು ವಿಶೇಷವಾಗಿತ್ತು.

'ಆಲಗೂರರು ಹೇಳಿರುವುದಕ್ಕಿಂತ ಹೆಚ್ಚಿನ ಅಂತರದಿಂದ ಪಕ್ಷ ಗೆಲ್ಲುವ ವಿಶ್ವಾಸವಿದೆ. ಎಲ್ಲರೊಡಗೂಡಿ ಸಂಘಟನೆ, ಚುನಾವಣೆ ಎದುರಿಸಲು ಪಣ ತೊಟ್ಟಿರುವೆವು. ರಾಜ್ಯದಲ್ಲಿ ಇಪ್ಪತ್ತಕ್ಕೂ ಹೆಚ್ಚು ಸೀಟುಗಳನ್ನು ಕಾಂಗ್ರೆಸ್ ಗೆಲ್ಲಲಿದೆ' ಎಂದು ಮಲ್ಲಿಕಾರ್ಜುನ ಲೋಣಿ ಹೇಳಿದರು.

# ನಾಗಠಾಣದಲ್ಲಿ ಸಂಭ್ರಮದ ಯುಗಾದಿ ಆಚರಣೆ



**ಉದಯರಶ್ಮಿ ನ್ಯೂಸ್**

ವಿಜಯಪುರ: ಭಾರತೀಯ ಸಂಸ್ಕೃತಿಯಲ್ಲಿ ಹಬ್ಬಗಳ ಪರಂಪರೆಯೇ ಇದೆ. ಮೆರವಣಿಗೆಯ ಸಾಲಿನಂತೆ ಬರುವ ಈ ಹಬ್ಬಗಳಲ್ಲಿ ಮೊದಲನೇಯದೇ ಈ ಯುಗಾದಿ! ಹೊಸ ಸಂವತ್ಸರದ ಬಾಗಿಲನ್ನು ತೆರೆಯುವ ಕೀಲಿಕೈಯಂತಹ ಈ ಹಬ್ಬ ಕಳಸ-ಕನ್ನಡಿ ಹೊತ್ತು ಬರುವ ಹಿರಿಯ ಮುತ್ತೈದೆಯಂತೆ! ಯುಗಾದಿ ಹಬ್ಬ ಬದುಕಿನಲ್ಲಿ ಹೊಸತನವನ್ನು ತರುವ ಹಬ್ಬ. ಋತುಗಳ ರಾಜನ ಆಗಮನದ ಹಬ್ಬವಾದ ಈ ಯುಗಾದಿ ಪ್ರತಿಯೊಬ್ಬರ ಬಾಳಿನಲ್ಲಿ ಹೊಸ ಹರುಷ ತರುವ ಹಬ್ಬವಾಗಿದೆ.

ಪ್ರಕೃತಿಯಲ್ಲಾಗುವ ಬದಲಾವಣೆಯಂತೆ ಮನುಷ್ಯನ ಬದುಕು ಸದಾ ಬದಲಾವಣೆಗೆ ತೆರೆದುಕೊಂಡಿರಬೇಕು. ಸಿಹಿ-ಕಹಿಗಳನ್ನು ಸಮಾನವಾಗಿ ಸ್ವೀಕರಿಸಬೇಕು. ನಿರಾಶೆಗಳಿಗೆ ಕುಗ್ಗದೆ ಆಶಾವಾದಿಯಾಗಿರಬೇಕು. ಪ್ರಕೃತಿಯಲ್ಲಿರುವ ಸಮಯಪ್ರಜ್ಞೆಯನ್ನು ನಾವು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕೆಂಬ ಸಂದೇಶವನ್ನು ನೀಡುವುದೇ ಈ ಹಬ್ಬದ ವಿಶೇಷ. ನಾವೆಲ್ಲರೂ ನಮ್ಮ ಬದುಕಿನಲ್ಲಿ ಸ್ವಾರ್ಥತೆಯನ್ನು ತೊರೆದು, ವಿಶಾಲಹೃದಯದ ಮನುಷ್ಯರಾದಾಗ ಮಾತ್ರ ಯುಗಾದಿ ಹಬ್ಬದ ಕಳಕಳಿ ಅರ್ಥವಾಗುತ್ತದೆ. ಬೇವು ತಿಂದವರಿಗೆ ಬೆಲ್ಲ ತಿನ್ನಿಸುವ, ಪರಿಪಾಠವನ್ನು ಬೆಳೆಸುವದೇ ಯುಗಾದಿ ಹಬ್ಬದ ಆಚರಣೆಯ ಉದ್ದೇಶ.

ತಾಲೂಕಿನ ನಾಗಠಾಣ ಗ್ರಾಮದ ಬಂಡೆ ಕುಟುಂಬದ ಸವಿತಾ, ಸುರೇಖಾ, ಗಾಯತ್ರಿ, ಶ್ರೇಯಾ, ಅನುಶ್ರೀ, ಶ್ರೀನಿಧಿ, ಆದೇಶ, ಆರುಷಿ, ಸುಶಾಂತ ಅವರು ಬೇವು-ಬೆಲ್ಲದೊಂದಿಗೆ ಯುಗಾದಿ ಹಬ್ಬ ಆಚರಿಸಿದರು.

### ಬೆಂಗಳೂರಿನಲ್ಲಿ ನಡೆದ ಶಕ್ತಿಕೇಂದ್ರ ಪ್ರಮುಖರ ಸಭೆಯಲ್ಲಿ ಬಿ.ಎಸ್. ಯಡಿಯೂರಪ್ಪ ಭವಿಷ್ಯ

# ಲೋಕಸಭೆ ಚುನಾವಣೆ ನಂತರ ರಾಜ್ಯ ಸರ್ಕಾರ ಪತನ!

ಬೆಂಗಳೂರು: ಲೋಕಸಭೆ ಚುನಾವಣೆ ನಂತರ ರಾಜ್ಯ ಕಾಂಗ್ರೆಸ್ ಸರ್ಕಾರ ಪತನವಾಗಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹಾದಿ ಅಂತ್ಯವಾಗಲಿದೆ ಎಂದು ಬಿಜೆಪಿ ಹಿರಿಯ ನಾಯಕ ಬಿಎಸ್ ಯಡಿಯೂರಪ್ಪ ಮಂಗಳವಾರ ಭವಿಷ್ಯ ನುಡಿದಿದ್ದಾರೆ.



ಅರಮನೆ ಮೈದಾನದಲ್ಲಿ ನಡೆದ ಶಕ್ತಿಕೇಂದ್ರ ಪ್ರಮುಖರ ಸಭೆಯಲ್ಲಿ ಯಡಿಯೂರಪ್ಪ ಅವರು ಚಾಮರಾಜನಗರ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಅವರಿಗೆ 60,000 ಮತಗಳ ಮುನ್ನಡೆ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ತಮ್ಮ ತವರು ಕ್ಷೇತ್ರ ವರುಣಾದಲ್ಲಿ ಮತದಾರ–ರಿಗೆ ಕರೆ ನೀಡಿದ್ದನ್ನು ಉಲ್ಲೇಖಿಸಿ ಮಾತನಾಡಿದರು.

ಸಿದ್ದರಾಮಯ್ಯನವರು ತಮ್ಮ ಸಮಯ ಮುಗಿಯುತ್ತಿದೆ ಎಂದು ಅರಿತುಕೊಂಡಿದ್ದಾರೆ. ಹೀಗಾಗಿ ಮತದಾರರಲ್ಲಿ ಇಂತಹ ಮನವಿಗಳನ್ನು ಮಾಡುತ್ತಿದ್ದಾರೆ ಎಂದು ಹೇಳಿದರು.

ಇದೇ ವೇಳೆ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ ಅವರು, ನಿಮ್ಮ ಪ್ರಧಾನಿ ಅಭ್ಯರ್ಥಿ ಯಾರು?. ಯಾರಾದರೂ ಹೇಳುತ್ತಾರಾ, ತಾಕತ್ತಿದೆಯಾ? ಹಣ ಹೆಂಡದ ಮೇಲೆ ತುಘಲಕ್ ದರ್ಬಾರ್ ನಡೆಸಿ ಅಧಿಕಾರ ಹಿಡಿಯುವ ಭರವಸೆಯಲ್ಲಿದ್ದಾರೆ. ರಾಜ್ಯದ ಉದ್ದಗಲಕ್ಕೆ ನಾವೆಲ್ಲಾ ಹಿರಿಯ ಮುಖಂಡರ ಜತೆ ವಿಧಾನಸಭಾ ಕ್ಷೇತ್ರಗಳಿಗೆ ಬಂದು ಕಾರ್ಯಕರ್ತರ ಸಭೆ ನಡೆಸಲಿದ್ದೇವೆ. ಈ ಬಾರಿ 28 ಕ್ಷೇತ್ರ ಗೆದ್ದು ದೆಹಲಿಗೆ ಆ 28 ಸದಸ್ಯರನ್ನು ಕರೆದುಕೊಂಡು ಬರುತ್ತೇನೆ ಎಂದು ಅಮಿತ್ ಶಾ ಅವರಿಗೆ ಭರವಸೆ ನೀಡಿದರು.

ಮೋದಿ ಮತ್ತೆ ರಾಜ್ಯಕ್ಕೆ ಬರಲಿದ್ದಾರೆ. ನಾವೆಲ್ಲಾ ಒಟ್ಟಾಗಿ ಒಂದಾಗಿ ಕೆಲಸ ಮಾಡೋಣ. ರಾಜ್ಯ ಪ್ರವಾಸ ಮಾಡುತ್ತೇನೆ, 82 ವರ್ಷವಾದರೂ ಮನೆ ಸೇರುವ ಪ್ರಶ್ನೆಯೇ ಇಲ್ಲ. ತುಘಲಕ್ ಸರ್ಕಾರವನ್ನು ಜನರಿಗೆ ತಿಳಿಸೋಣ. ಎಲ್ಲಿ ಕರೆಯುತ್ತೀರೋ ಅಲ್ಲಿಗೆ ಬರಲಿದ್ದೇನೆ. ಈ ಸರ್ಕಾರ ಮಾಡಿದ ಅನ್ಯಾಯವನ್ನು ವಿವರಿಸೋಣ. ಚುನಾವಣೆ ಮುಗಿಯುವವರೆಗೂ ಮನೆ ಸೇರಲ್ಲ, ಬಿಜೆಪಿ ಅಭ್ಯರ್ಥಿ ಗೆಲ್ಲಿಸಲು ಶ್ರಮಿಸಿದರೆ ನಮಗೆ ಗೆಲುವು ಕಷ್ಟವಲ್ಲ, ಮಾದರಿ ರಾಜ್ಯವಾಗಿ ಮಾಡಲು ಬಿಜೆಪಿ ಅಧಿಕಾರಕ್ಕೆ ತರಬೇಕು ಎಂದರು.

#### ಎಲ್ಲ 28 ಸೀಟು ಗೆದ್ದು, ಮೋದಿಗೆ ಉಡು–ಗೊರೆ

ಬೆಂಗಳೂರು: ಲೋಕಸಭೆ ಚುನಾವಣೆಯಲ್ಲಿ "ರಾಜ್ಯದ ಎಲ್ಲಾ 28 ಸ್ಥಾನಗಳನ್ನು ಗೆದ್ದು ಪ್ರಧಾನಿ ಮೋದಿಯವರಿಗೆ ಅರ್ಪಿಸುತ್ತೇವೆ" ಎಂದು ಮಾಜಿ ಮುಖ್ಯಮಂತ್ರಿ ಮತ್ತು ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ ಹೇಳಿದ್ದಾರೆ.

ಮಂಗಳವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಯಡಿಯೂರಪ್ಪ, ಉನ್ನತ ನಾಯಕತ್ವವು 400ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲುವ ಗುರಿ ಹೊಂದಿದೆ. "ರಾಜ್ಯದಿಂದ ಎಲ್ಲಾ 28 ಅಭ್ಯರ್ಥಿಗಳನ್ನು ಗೆಲ್ಲಿಸಿ ನಾನು ದೆಹಲಿಗೆ ಕಳುಹಿಸುತ್ತೇನೆ ಎಂದು ಅವರಿಗೆ ಭರವಸೆ ನೀಡಿದ್ದೇನೆ. ನನಗೆ ಅದರಲ್ಲಿ ವಿಶ್ವಾಸವಿದೆ. ಇದೇ ವಿಷಯವನ್ನು ಪ್ರಧಾನಿ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೂ ಹೇಳಿದ್ದೇನೆ. ಈ ಬಾರಿ ಖಂಡಿತವಾಗಿಯೂ ಇಲ್ಲಿ ಎಲ್ಲಾ ಸ್ಥಾನಗಳನ್ನು ಗೆದ್ದು ಪ್ರಧಾನಿ ಮೋದಿಯವರಿಗೆ ಉಡುಗೊರೆಯಾಗಿ ನೀಡುತ್ತೇವೆ ಎಂದು ಹೇಳಿದರು.

"ಎಲ್ಲವೂ ನಮ್ಮ ಪರವಾಗಿದೆ. ನಾವು ನಮ್ಮ ಗುರಿಯನ್ನು ತಲುಪುತ್ತೇವೆ. ಪ್ರಧಾನಿ ಮೋದಿ ಅವರು ಏಪ್ರಿಲ್ 14 ರಂದು ಕರಾವಳಿ ನಗರವಾದ ಮಂಗಳೂರು ಮತ್ತು ರಾಜಧಾನಿ ಬೆಂಗಳೂರಿನಲ್ಲಿ ಪ್ರಚಾರ ಮಾಡಲು ಯೋಚಿಸುತ್ತಿದ್ದಾರೆ. ಅವರ ಕಾರ್ಯಕ್ರಮವನ್ನು ಅಂತಿಮಗೊಳಿಸಬೇಕಾಗಿದೆ" ಎಂದು ಮಾಜಿ ಸಿಎಂ ವಿವರಿಸಿದರು.

ಬಿಜೆಪಿಯಲ್ಲಿ ಟಿಕೆಟ್ ಹಂಚಿಕೆ ಸಂದರ್ಭದಲ್ಲಿ ಉಂಟಾದ ಬಂಡಾಯ ಮತ್ತು ಭಿನ್ನಾಭಿಪ್ರಾಯವನ್ನು ಸಮರ್ಥವಾಗಿ ನಿಭಾಯಿಸಲಾಗಿದ್ದು, ಇದೀಗ ಎಲ್ಲವೂ ಸರಿಯಾಗಿದೆ. "ನಾನು ಎಲ್ಲರನ್ನು ಮನೆಗೆ ಕರೆದಿದ್ದೇನೆ. ಚರ್ಚೆ ನಡೆಸಿ ಒಗ್ಗಟ್ಟಾಗಿ ಹೋಗುವಂತೆ ಹೇಳಿದ್ದೇನೆ. ಈಗ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ" ಎಂದು ಯಡಿಯೂರಪ್ಪ ಹೇಳಿದರು.

### ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಜಿಲ್ಲಾ ಎಸ್.ಸಿ ಘಟಕದ ವತಿಯಿಂದ ಸನ್ಮಾನ

# ಕಾಂಗ್ರೆಸ್ ನೂತನ ಜಿಲ್ಲಾಧ್ಯಕ್ಷ ಲೋಣಿ ಗೆ ಸನ್ಮಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲಾ ಕಾಂಗ್ರೆಸ್‌ನ ನಿಕಟಪೂರ್ವ ಅಧ್ಯಕ್ಷರು ಹಾಗೂ ಲೋಕಸಭಾ ಅಭ್ಯರ್ಥಿಯಾದ ರಾಜು ಆಲಗೂರ ಅವರು ಕಾಂಗ್ರೆಸ್ ಪಕ್ಷದ ನೂತನ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಲೋಣಿ ಅವರಿಗೆ ಅಧಿಕಾರ ಹಸ್ತಾಂತರ ಮಾಡಿದ ನಂತರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಜಿಲ್ಲಾ ಎಸ್.ಸಿ ಘಟಕದ ವತಿಯಿಂದ ಎಸ್.ಸಿ ಘಟಕದ ಜಿಲ್ಲಾಧ್ಯಕ್ಷ ರಮೇಶ ಗುಬ್ಬೆವಾಡ, ಸಂಘಟನಾ ಕಾರ್ಯದರ್ಶಿ ಮಹಾದೇವ ಚಲವಾದಿ, ಜಿಲ್ಲಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮಣ ಚಲವಾದಿ ಹಾಗೂ ರಜಾಕ ಬಬಲೇಶ್ವರ ಅವರು ಸೇರಿ ಸಂವಿದಾನ ಪೀಠಿಕೆ ನೀಡುವುದರ ಮೂಲಕ ಸನ್ಮಾನಿಸಿ ಗೌರವಿಸಿದರು.




ಈ ಸಂದರ್ಭದಲ್ಲಿ ನಿಕಟಪೂರ್ವ ಅಧ್ಯಕ್ಷರು ಹಾಗೂ ಲೋಕಸಭಾ ಅಭ್ಯರ್ಥಿಯಾದ ರಾಜು ಆಲಗೂರ ಅವರು ಅಧಿಕಾರ ಹಸ್ತಾಂತರ ಮಾಡುವ ವೇಳೆ 'ಬೇವು–ಬೆಲ್ಲ' ನೀಡುವುದರೊಂದಿಗೆ ನನಗೆ ಯಾವ ರೀತಿಯಾಗಿ ಜಿಲ್ಲೆಯ ಎಲ್ಲಾ ಕಾಂಗ್ರೆಸಿನ ಮುಖಂಡರು, ಕಾರ್ಯಕರ್ತರು ಬೆಂಬಲ ನೀಡಿದ್ದೀರಿ, ಅದೇ ರೀತಿ ಲೋಣಿ ಅವರಿಗೂ ಬೆಂಬಲ ನೀಡುವದರೊಂದಿಗೆ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷದ ಸಾಧನೆಯನ್ನು ಮನೆ ಮನೆಗೆ ಮುಟ್ಟಿಸುವುದರ ಜೊತೆಗೆ ಲೋಕಸಭಾ ಚುನಾವಣೆಯಲ್ಲಿ ಗೆಲ್ಲಿಸುವ ಶತಪ್ರಯತ್ನವನ್ನು ನಾವು ನೀವೆಲ್ಲರೂ ಸೇರಿಕೊಂಡು ಮಾಡೋಣ ಎಂದರು.

ಈ ವೇಳೆ ವಿಠ್ಠಲ ಕಟಕದೊಂಡ ಹಾಗೂ ಹಮ್ಮಿದ ಮುಶ್ರೀಫ ಮಾತನಾಡಿ, ಕಾಂಗ್ರೆಸ್ ಪಕ್ಷ ಕೇವಲ ಎಸ್.ಸಿ, ಎಸ್.ಟಿ ಹಾಗೂ ಅಲ್ಪಸಂಖ್ಯಾತರಿಗೆ ಮಾತ್ರ ಯೋಜನೆಗಳನ್ನು ರೂಪಿಸದೇ ರಾಜ್ಯದ ಸರ್ವಜನಾಂಗದವ–ರಿಗೂ 5 ಗ್ಯಾರಂಟಿ ಅಭಿವೃದ್ಧಿ ಯೋಜನೆಗಳನ್ನು ತಂದು ಯಶಸ್ವೀಯಾಗಿ ಪ್ರತಿಯೊಬ್ಬರ ಮನೆಗಳಿಗೂ ತಲುಪಿಸಿ ಸರ್ವಾಂಗಿಣ ಅಭಿವೃದ್ದಿಯತ್ತ ರಾಜ್ಯವನ್ನು ಮುನ್ನಡೆಸುತ್ತಿದ್ದೇವೆ, ಇದು ಚುನಾವಣೆಗೆ ಮಾತ್ರ ಸಿಮೀತಗೊಳಿಸದೇ ನಿರಂತರವಾಗಿ ಮಾಡಿಕೊಂಡು ಬಂದಿರುವುದು ಕಾಂಗ್ರೆಸ್‌ನ ಸಾಧನೆಯಾಗಿದೆ, ಅದೇರೀತಿಯಾಗಿ ಲೋಕಸಭಾ ಚುನಾವಣೆಯಲ್ಲಿಯೂ ಜಯಭೇರಿ ಸಾಧಿಸುವ ಅಚಲ ನಂಬಿಕೆ ಇದೆ ಎಂದರು.

### ಬೆಂಗಳೂರು ದಕ್ಷಿಣ ಕ್ಷೇತ್ರದಲ್ಲಿ ಸೌಮ್ಯಾರೆಡ್ಡಿ ಪರ ಪ್ರಚಾರದಲ್ಲಿ ಸಿಎಂ ಸಿದ್ದರಾಮಯ್ಯ ಅಭಿಮತ

# ಬೆಂಗಳೂರಿಗೆ ಕುಡಿವ ನೀರೊದಗಿಸಲು ಮೇಕೆದಾಟು ಯೋಜನೆ ಅನಿವಾರ್ಯ

ಬೆಂಗಳೂರು: ಲೋಕಸಭೆ ಚುನಾವಣೆ ಹಿನ್ನೆಲೆ ಸಿಎಂ ಸಿದ್ದರಾಮಯ್ಯ ಅವರು ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಅವರ ಪರವಾಗಿ ಭರ್ಜರಿ ಪ್ರಚಾರ ಮಾಡಿದ್ದು, ಈ ವೇಳೆ ಅವರು ಮೇಕೆದಾಟು ಯೋಜನೆ ಬಗ್ಗೆ ಮಹತ್ವದ ಮಾಹಿತಿಯನ್ನು ನೀಡಿದ್ದಾರೆ.




ಬೆಂಗಳೂರಿಗೆ ಕುಡಿಯುವ ನೀರು ಒದಗಿಸಲು ಮೇಕೆದಾಟು ಯೋಜನೆ ಅನಿವಾರ್ಯ ಆಗಿದ್ದು, ಮೇಕೆದಾಟು ಯೋಜನೆಗೆ ಕೇಂದ್ರದಿಂದ ಅನುಮತಿ ಸಿಗಬೇಕಾದರೆ ಸೌಮ್ಯಾರೆಡ್ಡಿ ಗೆಲ್ಲಲೇಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದ್ದಾರೆ.

ಬೆಂಗಳೂರು ದಕ್ಷಿಣ ಕ್ಷೇತ್ರದಲ್ಲಿ ಸೌಮ್ಯಾರೆಡ್ಡಿ ಅವರ ಪರವಾಗಿ ಪ್ರಚಾರದ ಎರಡನೇ ದಿನವಾದ ಸೋಮವಾರ (ಏಪ್ರಿಲ್ 8) ಮುಖ್ಯಮಂತ್ರಿಗಳು ಬಿರುಸಿನ ರೋಡ್ ಶೋ ನಡೆಸಿದ್ದು, ಈ ವೇಳೆ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಅವರ ಸರಣಿ ವೈಫಲ್ಯಗಳನ್ನು ಬಿಚ್ಚಿಟ್ಟಿದ್ದಾರೆ. ಇನ್ನು "ಬೆಂಗಳೂರು ದಕ್ಷಿಣದಲ್ಲಿ ಕುಡಿಯುವ ನೀರಿಗಾಗಿ ಕಾವೇರಿ ಸಂಪರ್ಕ ಹೆಚ್ಚಿಸಬೇಕಿದೆ. ಈಗ ಶೇಕಡಾ 60ರಷ್ಟು ಮಾತ್ರ ಆಗಿದೆ. ಮೇಕೆದಾಟು ಯೋಜನೆ ಜಾ–ರಿಯಾಗಬೇಕಾದರೆ ಸೌಮ್ಯಾರೆಡ್ಡಿ ಅವರ ಗೆಲುವು ಅತ್ಯಗತ್ಯ," ಎಂದರು.

ಮೇಕೆದಾಟು ಯೋಜನೆಯು ರಾಮನಗರ ಜಿಲ್ಲೆಯ ಕನಕಪುರ ಬಳಿ ಸಮತೋಲನ ಜಲಾಶಯದ ನಿರ್ಮಾಣವನ್ನು ಒಳಗೊಂಡ ಬಹುಪಯೋಗಿ ಯೋಜನೆಯಾಗಿದೆ. ಇದು ಪೂರ್ಣಗೊಂಡ ನಂತರ, ಬೆಂಗಳೂರು ನಗರಕ್ಕೆ ಕುಡಿಯುವ ನೀರಿನ ಉದ್ದೇಶಕ್ಕಾಗಿ 4 ಟಿಎಂಸಿ ನೀರನ್ನು ಪೂರೈಸುವ ನಿರೀಕ್ಷೆಯಿದೆ ಎಂದರು.


"ವಿಧಾನಸಭಾ ಚುನಾವಣೆಯ ಮತ ಎಣಿಕೆ ವೇಳೆ ಸೌಮ್ಯಾ ರೆಡ್ಡಿಗೆ ಅನ್ಯಾಯ ಆಗಿದೆ. ನ್ಯಾಯಾಲಯದಲ್ಲಿ ನಮಗೆ ನ್ಯಾಯ ಸಿಗುತ್ತದೆ. ಲೋಕಸಭೆ ಚುನಾವಣೆಯಲ್ಲಿ ನ್ಯಾಯ ದೊರಕಿಸಿಕೊಡಬೇಕು," ಎಂದು ಜನರಿಗೆ ಮನವಿ ಮಾಡಿದರು.

ಕರ್ನಾಟಕದಲ್ಲಿ ಏಪ್ರಿಲ್ 26 ಮತ್ತು ಮೇ 7ರಂದು 28 ಕ್ಷೇತ್ರಗಳಿಗೆ ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದೆ. ಕರ್ನಾಟಕವು 28 ಲೋಕಸಭಾ ಕ್ಷೇತ್ರಗಳನ್ನು ಹೊಂದಿದ್ದು, ಇದರಲ್ಲಿ ಐದು ಸ್ಥಾನಗಳು ಎಸ್‌ಸಿ ಅಭ್ಯರ್ಥಿಗಳಿಗೆ ಮತ್ತು ಎರಡು ಎಸ್‌ಟಿ ಅಭ್ಯರ್ಥಿಗಳಿಗೆ ಮೀಸಲಾಗಿವೆ.

2019ರ ಲೋಕಸಭಾ ಚುನಾವಣೆಯಲ್ಲಿ, ಬಿಜೆಪಿ 51.7 ಶೇಕಡಾ ಮತಗಳ ಹಂಚಿಕೆಯೊಂದಿಗೆ 25 ಸ್ಥಾನಗಳನ್ನು ಗೆದ್ದರೆ, ಕಾಂಗ್ರೆಸ್ 32.1 ಶೇಕಡಾ ಮತಗಳೊಂದಿಗೆ 1 ಸ್ಥಾನವನ್ನು ಗೆದ್ದಿದೆ. ಕರ್ನಾಟಕದಲ್ಲಿ ಜೆಡಿಎಸ್ ಮತ್ತು ಸ್ವತಂತ್ರರು ತಲಾ ಒಂದು ಸ್ಥಾನವನ್ನು ಗೆದ್ದಿದ್ದಾರೆ. ಇನ್ನು 543 ಲೋಕಸಭಾ ಸ್ಥಾನಗಳಿಗೆ ಏಪ್ರಿಲ್ 19ರಿಂದ ಏಳು ಹಂತಗಳಲ್ಲಿ ಸಾರ್ವತ್ರಿಕ ಚುನಾವಣೆ ನಡೆಯಲಿದ್ದು, ಜೂನ್ 4ರಂದು ಮತ ಎಣಿಕೆ ನಡೆಯಲಿದೆ.

# ರಾಜೀವ್ ಚಂದ್ರಶೇಖರ್ ಅಫಿಡವಿಟ್ ಪರಿಶೀಲಿಸುವಂತೆ ತೆರಿಗೆ ಮಂಡಳಿಗೆ ಸೂಚಿಸಿದ ಚು. ಆಯೋಗ

ದೆಹಲಿ: ಕೇಂದ್ರ ಸಚಿವ ಹಾಗೂ ಕೇರಳದ ತಿರುವನಂತಪುರಂ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ರಾಜೀವ್ ಚಂದ್ರಶೇಖರ್ ಸಲ್ಲಿಸಿರುವ ಅಫಿಡವಿಟ್ ವಿವರಗಳಲ್ಲಿ ಏನಾದರು ಹೊಂದಾಣಿಕೆಯಾಗದಿರುವ ಅಂಶಗಳಿವೆಯೇ? ಎಂದು ಪರಿಶೀಲಿಸುವಂತೆ ಕೇಂದ್ರೀಯ ನೇರ ತೆರಿಗೆ ಮಂಡಳಿಗೆ (ಸಿಬಿಡಿಟಿ) ಚುನಾವಣಾ ಆಯೋಗ ಮಂಗಳವಾರ ಸೂಚಿಸಿದೆ ಎಂದು ವರದಿಯಾಗಿದೆ.




ಕಾಂಗ್ರೆಸ್ ನಾಯಕ ಶಶಿ ತರೂರ್ ವಿರುದ್ಧ ಕಣದಲ್ಲಿರುವ ರಾಜೀವ್ ಚಂದ್ರಶೇಖರ್ ಅವರು ಸಲ್ಲಿಸಿರುವ ಅಫಿಡವಿಟ್‌ನಲ್ಲಿ ಅಂಶಗಳು ಮತ್ತು ಘೋಷಿತ ಆಸ್ತಿಯ ನಡುವೆ ಹೊಂದಾಣಿಕೆಯಾಗುತ್ತಿಲ್ಲ ಎಂದು ಕಾಂಗ್ರೆಸ್ ಚುನಾವಣಾ ಆಯೋಗಕ್ಕೆ ದೂರು ನೀಡಿತ್ತು.

ಕಾರ್ಯವಿಧಾನದ ಪ್ರಕಾರ, ಚಂದ್ರಶೇಖರ್ ಅವರು ಸಲ್ಲಿಸಿರುವ ಅಫಿಡವಿಟ್ ವಿವರಗಳಲ್ಲಿ ಏನಾದರು ಹೊಂದಾಣಿಕೆಯಾಗದ ಅಂಶಗಳಿವೆಯೇ? ಎಂದು ಪರಿಶೀಲಿಸಲು ಸಿಬಿಡಿಟಿಗೆ ಚುನಾವಣಾ ಆಯೋಗ ನಿರ್ದೇಶಿಸಿದೆ ಎಂದು ತಿಳಿದು ಬಂದಿದೆ.

ಅಫಿಡವಿಟ್‌ನಲ್ಲಿ ಯಾವುದಾದರು ಹೊಂದಾಣಿಕೆಯಾಗದಿರುವುದು ಅಥವಾ ತಪ್ಪು ಮಾಹಿತಿ ಕಂಡು ಬಂದರೆ 1951ರ ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 125 ಎ ಅಡಿಯಲ್ಲಿ ರಾಜೀವ್ ಚಂದ್ರಶೇಖರ್ ವಿರುದ್ಧ ಕ್ರಮ ಕೈಗೊಳ್ಳುವ ಸಾಧ್ಯತೆ ಇದೆ.

ಕಾನೂನಿನ ಪ್ರಕಾರ, ನಾಮನಿರ್ದೇಶನ ಪತ್ರಗಳಲ್ಲಿ ಅಥ–'ವಾ ಅಫಿಡವಿಟ್‌ನಲ್ಲಿ ಯಾವುದೇ ಮಾಹಿತಿಯನ್ನು ಮರೆಮಾಚಿರುವುದು ಸಾಭೀತಾದರೆ, ಆರು ತಿಂಗಳವರೆಗೆ ವಿಸ್ತ–ರಿಸಬಹುದಾದ ಜೈಲು ಶಿಕ್ಷೆಅಥವಾ ದಂಡ. ಇಲ್ಲಾ ಎರಡನ್ನೂ ವಿಧಿಸಬಹುದು.




**ಉದಯರಶ್ಮಿ ದಿನಪತ್ರಿಕೆ**

# ಸುಸ್ಥಿರ ಆರೋಗ್ಯಕ್ಕೆ 8 + 8 + 8 ರೂಲ್

**ವೀಣಾಂತರಂಗ**



**–ವೀಣಾ ಎಚ್. ಪಾಟೀಲ್, ಮುಂಡರಗಿ**

19ನೇ ಶತಮಾನದ ಆದಿಯಲ್ಲಿ ರಾಬರ್ಟ್ ಓವೆನ್ ಎಂಬ ಸಾಮಾಜಿಕ ಸಮಾನತೆಯ ಅರಿವುಳ್ಳ ವ್ಯಕ್ತಿಯು ಪ್ರತಿಯೊಬ್ಬರು ವ್ಯಕ್ತಿಗೆ 10 ಗಂಟೆಗಳ ಹಗಲು ಹೊತ್ತನ್ನು ಹೊಂದಿರಬೇಕು ಎಂಬುದು ಆತನ ವಾದವಾಗಿ–ತ್ತು. 1817ರಲ್ಲಿ ನ್ಯೂಲನಾರ್ಕ್ ನಲ್ಲಿ ನಡೆದ ಸಾಮಾಜಿಕ ಸಮಾರಂಭದಲ್ಲಿ ಪ್ರತಿಯೊಬ್ಬ ವ್ಯಕ್ತಿಯು 8+8+8 ಫಾರ್ಮುಲವನ್ನು ಅಳವಡಿಸಿಕೊಳ್ಳಬೇಕು ಎಂದು ಆತ ಪ್ರತಿಪಾದಿಸಿದ ದೈಹಿಕ ಸ್ವಾಸ್ಥ ಮತ್ತು ಮಾನಸಿಕ ಸಂತುಲನವನ್ನು ಉಳಿಸಿಕೊಳ್ಳಲು 8 + 8 + 8 ರೂಲನ್ನು ಅಳವಡಿಸಿಕೊಳ್ಳಲೇಬೇಕು



ಹಾಗಾದರೆ ಯಾವುದು 8 + 8 + 8 ರೂಲ್

8 ಗಂಟೆಗಳ ನಿದ್ದೆ 8 ಗಂಟೆಗಳ ಪರಿಶ್ರಮ ಮತ್ತು 8 ಗಂಟೆಗಳ ವೈವಿಧ್ಯಮಯ ಚಟುವಟಿಕೆಗಳು.

8 ಗಂಟೆಗಳ ನಿದ್ದೆ ಅತ್ಯವಶ್ಯಕವಾಗಿ ಬೇಕು. ವ್ಯಕ್ತಿಯು ತನ್ನ ದೈನಂದಿನ ಚಟುವಟಿ–ಕೆಗಳಿಗೆ ಬೇಕಾಗುವ ಶಕ್ತಿಯನ್ನು ನಿದ್ರೆಯಿಂದಲೇ ಪಡೆಯುತ್ತಾನೆ. ನಿದ್ರೆ ಮನುಷ್ಯನ ಬಾಹ್ಯ ಚಟುವಟಿ–ಕೆಗಳಿಗೆ ವಿರಾಮವನ್ನು ಜೈವಿಕ ಚಟುವಟಿಕೆಗಳಿಗೆ ಕೊಂಚಮಟ್ಟಿಗಿನ ವಿಶ್ರಾಂತಿಯನ್ನು ನೀಡುತ್ತದೆ. ರಾತ್ರಿ 8ರ ಒಳಗಾಗಿ ಊಟ ಮಾಡುವುದ–ರಿಂದ ಮುಂದಿನ ಎರಡು ಗಂಟೆಗಳ ನಂತರ ನಿದ್ರೆ ಮಾಡುವ ವ್ಯಕ್ತಿ ಸತತ ಎಂಟು ಗಂಟೆಗಳ ನಿದ್ರೆಯನ್ನು ಮಾಡುವ ಮೂಲಕ ಆತನ ದೇಹದ ಸಕಲ ಅಂಗಗಳು ವಿಶ್ರಾಂತಿಯನ್ನು ಪಡೆಯುತ್ತವೆ. ಹೃದಯ ಮತ್ತು ಶ್ವಾಸಕೋಶಗಳು ಕೂಡ ತುಸು ಚೇತರಿಸಿಕೊಳ್ಳುತ್ತವೆ. ದೇಹವು ತನ್ನ ಮರುಪೂರಣ ಶಕ್ತಿಯನ್ನು ಸಂಚಯಿಸಿಕೊಳ್ಳುತ್ತದೆ.

ಎರಡನೇ ಎಂಟು ಗಂಟೆ ಪರಿಶ್ರಮ. 8 ಗಂಟೆಗಳ ಕಾಲ ಪರಿಶ್ರಮದ ಕಾರ್ಯ ನಿರ್ವಹಿಸಬೇಕು. ಯಾವ ರೀತಿ ಹೆಣ್ಣು ಮಕ್ಕಳು ಮನೆಯ ಕೆಲಸ ಕಾರ್ಯಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳುತ್ತಾರೋ ಹಾಗೆಯೇ ಎಲ್ಲರೂ ಕೂಡ 8 ಗಂಟೆಗಳ ಕಾಲ ಕಾರ್ಯನಿರ್ವಹಿಸಬೇಕು. ಉದರ ನಿಮಿತ್ತವೇ ಇರಲಿ.... ಉದ್ಯೋಗ ನಿಮಿತ್ತವೇ ಇರಲಿ



ಒಟ್ಟಿನಲ್ಲಿ ಎಂಟು ಗಂಟೆಗಳ ಕಾಲ ಕೆಲಸ ಮಾಡಲೇಬೇಕು. ಈ ಕೆಲಸದಲ್ಲಿ ಅವರ ದೈಹಿಕ ಶಕ್ತಿಯ ವಿನಿಯೋಗವಾಗಬೇಕು.

ಮೂರನೇ ಎಂಟು ಗಂಟೆಯನ್ನು ಆತ ಮತ್ತೆ ಮೂರು ವಿಭಾಗಗಳಲ್ಲಿ ಹಂಚಿದನು ಅವುಗಳೆಂದರೆ 3 ಎಫ್, ಮೂರು ಹೆಚ್ ಮತ್ತು ಮೂರು ಎಸ್ ಗಳು

ಮೂರು ಎಫ್ ಗಳು ಫ್ಯಾಮಿಲಿ ಫ್ರೆಂಡ್ಸ್ ಅಂಡ್ ಫೇತ್. ಕುಟುಂಬ ಸ್ನೇಹಿತರು ಮತ್ತು ನಾವು ನಂಬುವ ದೈವ.

ಸಂತಸವಾದ ಜೀವನ ಸಾಗಿಸಲು ಸುಭದ್ರವಾದ ಕುಟುಂಬ ವ್ಯವಸ್ಥೆ ಉತ್ತಮ ಸ್ನೇಹಿತರು ಮತ್ತು ನಾವು ಮಾಡುವ ಪ್ರತಿಯೊಂದು ಕೆಲಸದಲ್ಲಿಯೂ ವಿಶ್ವಾಸ ನಂಬಿಕೆ ಇರಬೇಕು.

ಮೂರು ಹೆಚ್ ಗಳು ಹೆಲ್ತ್, ಹೈಜೀನ್ ಅಂಡ್ ಹಾಬೀಸ್

ಆರೋಗ್ಯ ಸುರಕ್ಷತೆ ಮತ್ತು ಹವ್ಯಾಸಗಳು

ದೈಹಿಕ ಆರೋಗ್ಯ ನಮ್ಮ ಮಾನಸಿಕ ಸಂತುಲನವನ್ನು ಕಾಪಾಡುತ್ತದೆ. ಅ ಸೌಂಡ್ ಮೈಂಡ ಇನ ಅ ಸೌಂಡ್ ಬಾಡಿ ಎನ್ನುವುದು ಇದಕ್ಕೆ. ಆರೋಗ್ಯಕರ ದೇಹದಲ್ಲಿ ಆರೋಗ್ಯಕರ ಮನಸ್ಸು ಇರುತ್ತದೆ. ದೈಹಿಕ ಮತ್ತು ಮಾನಸಿಕ ನೈರ್ಮಲ್ಯಗಳು ವ್ಯಕ್ತಿತ್ವವನ್ನು ಬೆಳಗುತ್ತವೆ. ಅಂತೆಯೇ ಒಳ್ಳೆಯ ಹವ್ಯಾಸಗಳು ನಮ್ಮನ್ನು ಸದಾ ಚಟುವಟಿಕೆಯಲ್ಲಿ ಇರಿಸುತ್ತವೆಯಲ್ಲದೇ ಮನಸ್ಸಿಗೆ ಉಲ್ಲಾಸ, ಸಂಭ್ರಮವನ್ನು ನೀಡುತ್ತವೆ. ಪ್ರತಿ ಹೊಸ ಹವ್ಯಾಸವು ಮನಸ್ಸಿಗೆ ಮುದ ನೀಡುತ್ತದೆ.



3 ಎಸ್ ಗಳು.... ಸೋಲ್, ಸರ್ವೀಸ್ ಮತ್ತು ಸ್ಮೈಲ್. ನೀವು ಮಾಡುವ ಕೆಲಸ ನಿಮ್ಮ ಆತ್ಮಸಾಕ್ಷಿಗೆ ಅನುಗುಣವಾಗಿರಲಿ, ಯಾರನ್ನು ಮೆಚ್ಚಿಸಲು ಅಲ್ಲ. ಸೇವಾಪರತೆಯಿಂದ ಕೂಡಿರಲಿ ಮತ್ತು ನಗುನಗುತ್ತಾ ಸಂತೋಷಕರ ಜೀವನವನ್ನು ಕಳೆಯಿರಿ.

ವಿಪರ್ಯಾಸವೆಂದರೆ 19ನೇ ಶತಮಾನದಲ್ಲಿ ರಾಬರ್ಟ್ ಓವೆನ್ ಹೇಳಿದ್ದನ್ನು ಶತಶತಮಾನಗಳ ಹಿಂದೆ



ನಮ್ಮ ಪೂರ್ವಜರು ಆಚರಿಸುತ್ತಿದ್ದರು. ಬ್ರಾಹ್ಮಿ ಮುಹೂರ್ತದಲ್ಲಿ ಏಳುತ್ತಿದ್ದ ಅವರು ಪ್ರಾತಃಕರ್ಮಗಳನ್ನು ಪೂರೈಸಿ ಉದರ ನಿಮಿತ್ತ ದೈಹಿಕ ಶ್ರಮದ ಕಾಯಕಗಳಲ್ಲಿ ತೊಡಗಿ ಕೊಳ್ಳುತ್ತಿದ್ದರು. ಇಳಿ ಹೊತ್ತಿನಲ್ಲಿ ತಮ್ಮ ದೈಹಿಕ ಶ್ರಮದ ಕಾರ್ಯಗಳನ್ನು ನಿಲ್ಲಿಸಿ ಮನೆಗೆ ಮರಳುತ್ತಿದ್ದ ಅವರು ಸಂಜೆಯಾಗುತ್ತಿದ್ದಂತೆ ದೇವರ ಮುಂದೆ ಪ್ರಾರ್ಥನೆ ಸಲ್ಲಿಸುತ್ತಿದ್ದರು. ಮನೆಯ ಹೊರಗಿನ ಮರದ ಕೆಳಗೆ ಕುಳಿತು ನೆರೆಹೊರೆಯವರೊಂದಿಗೆ ಮಾತನಾಡುತ್ತಾ ಕಾಲ ಕ್ಷೇಪ ಮಾಡುತ್ತಿದ್ದರು. ಬೇಗನೆ ಊಟ ಮಾಡಿ ಮಲಗುತ್ತಿದ್ದರು.

ಹಬ್ಬ ಹರಿದಿನಗಳಲ್ಲಿ, ಮದುವೆ ಮುಂಜಿಗಳಲ್ಲಿ ಉತ್ಸವ ಜಾತ್ರೆಗಳಲ್ಲಿ ಸಂಭ್ರಮವೇ ಮನೆ ಮಾಡಿದಂತೆ ತೊಡಗಿಕೊಳ್ಳುತ್ತಿದ್ದರು. ಪುರಾಣ, ಪುಣ್ಯಶ್ರವಣ, ಕೀರ್ತನೆ, ಭಜನೆಗಳಲ್ಲಿ ಕಾಲ ಕಳೆಯುತ್ತಿದ್ದರು. ದೇಸಿ ಆಟಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ದೇಹವನ್ನು ಗಟ್ಟಿಮುಟ್ಟಾಗಿಟ್ಟುಕೊಳ್ಳುತ್ತಿದ್ದರು. ಉಪವಾಸ, ಏಕಾದಶಿ

ನಿರಾಹಾರ ಎಂದು ಆಚ–ರಿಸುತ್ತಾ ಜೀರ್ಣಾಂಗ ವ್ಯೂಹಕ್ಕೆ ವಿಶ್ರಾಂತಿ ನೀಡುತ್ತಿದ್ದರು. ದೈಹಿಕ, ಮಾನಸಿಕವಾಗಿಯಲ್ಲದೆ ಭಾವನಾತ್ಮಕವಾಗಿ ಭಕ್ತಿಪೂರ್ವಕವಾಗಿ ತಮ್ಮನ್ನು ತಾವು ತೊಡಗಿಸಿಕೊಳ್ಳುತ್ತಿದ್ದರು. ದಾನ ಧರ್ಮಗಳಲ್ಲಿ ನಂಬಿಕೆ ಇದ್ದು ಉಳ್ಳವರು ದೇಹಿ ಎಂದು ಬಂದವನಿಗೆ ನೀಡಿ ಹಾಗೆ ನೀಡಲು ತಮಗೆ ಶಕ್ತಿ ಕೊಟ್ಟ ಆ ಭಗವಂತನಿಗೆ ಕೃತಾರ್ಥರಾಗುತ್ತಿದ್ದರು. ಇದುವೇ ನಮ್ಮ ಪ್ರಾಚೀನ ಪರಂಪರೆಯ ಮಹತ್ವ.

ಒಟ್ಟಿನಲ್ಲಿ ಪೂರ್ವದ್ದೇ ಇರಲಿ ಪಶ್ಚಿಮದ್ದೇ ಬರಲಿ. ಒಳ್ಳೆಯದು ಎಲ್ಲಾ ಕಡೆಯಿಂದ ಹರಿದು ಬರಲಿ.

ವಿಶ್ವ ಮಾನವ ಪ್ರಜ್ಞೆ ನಮ್ಮಲ್ಲಿರಲಿ ಎಂದು ಆಶಿಸೋಣ.



# ‘ಈಸ್ಪೂರಿ ಕೊತ ಕೊತ–ಸಿಟ್ಟೂರಿ ಗಡ ಗಡಟ

ಉದಯರಶ್ಮಿ ದಿನಪತ್ರಿಕೆ

‘ಏನಲೇ ಬುಕಡ್ಯಾ ಎಲ್ಲಿ ಹೋಗಿದ್ದೆಲೆ? ಕಂಡೇ ಇಲ್ಲ?’ ಗುಡುಮ್ಯಾ ಕೇಳ್ದ

‘ಏ ನಾ ಸೀಟ ಹಿಡ್ಯಾಕ ಹೋಗಿದ್ನ.... ಹಿಂಗಾಗಿ ಕಂಡಿಲ್ಲ’ ಎಂದ ಬುಕುಡ್ಯಾ

‘ಯಾವ ಸೀಟಪಾ? ಬಸ್ನಾಗ ಸೀಟ ಹಿಡ್ಯಾಕ ಹೋಗಿದ್ಯಾ?’ ವ್ಯಂಗವಾಗಿ ಕೇಳಿದ ಶೌರಿ

‘ಇಲ್ಲಾ ಇವಾನದಾಗ ಹಿಡ್ಯಾಕ ಹೋಗಿದ್ಯಾ, ಮಗನ ಏನ ಮಾತಾಡ್ತಿರಲೇ? ಮನಸಿಗಿ ಬಂದದ್ದ ಆಡೂದೇನು ಹಂಗ?’ ಎಂದು ಸಿಡುಕಿದ ಬುಕಡ್ಯಾ

‘ ಏ ತಮ್ಮಾ, ಯಾಕ ಸಿಟ್ಟಿಗೇರ್ತಿ? ಎಲ್ಲಿ ಹೋಗಿದ್ದಿ ಹೇಳು



ವ್ಯಂಗೋಕ್ತಿ

– ಶ್ರೀನಿವಾಸ ಜಾಲವಾದಿ, ಸುರಪುರ

ಸರಿಯಾಗಿ’ ಅಂತ ಕಾಕಾ ಕೇಳಿದ

‘ಅದೇ ಕಾಕಾ, ಈಗ ಇಲೆಕ್ಷನ್ ಡಿಕ್ಲೇರ ಆಗ್ಯಾವಲಾ, ಅದ್ಕ ಸೀಟ ಹಿಡ್ಯಾಕ ಹೋಗಿದ್ಯಾ, ಅದೇ ಕೋಲಾರದ್ದು’ ಅಂದ ಬುಕಡ್ಯಾ

‘ಕೋಲಾರದಾಗ ಜಂಗಿ ನಿಕಾಲಿ ಕುಸ್ತಿ ನಡಿದಿತ್ತ, ಎಲ್ಲಾರೂ ರಾಜಿನಾಮೆ ಪತ್ರ ಕಿಸೆದಾಗ ಇಟ್ಕೊಂಡೆ ಅಡ್ಡಾಡಕತ್ತಿದ್ರು, ಅಂಥಾದ್ರಾಗ ನೀ ಯಾವ ಪುಟಗೋಸಿಯಪಾ ಸೀಟ ಹೊಡ್ಕೊಂಡು ಬರಾಂವಾ?’ ಎಂದು ನಕ್ಕ ಗುಂಡ್ಯಾ

‘ಹೌಂದಪಾ, ಅಲ್ಲಿ ಮುನಿ,ರಮೇಶ ನಡಕ ಯಾವಾಗ್ಲೂ ಫೈಟ್! ಅದ್ಕ ನಂಗೇ ಚಾನ್ಸ ಇತ್ತ ಅಲ್ಲಿ’ ಎಂದ ಬುಕಡ್ಯಾ

‘ಏನಲೇ ಇಂವಾ ಅದೇನ ಮುನ್ಸಿಪಾಲ್ಟಿ ಇಲೆಕ್ಷನಂತ ತಿಳದಾನೇನ? ಎಂದ ರಬಡ್ಯಾ

‘ಅಲ್ಲಪಾ ನಿನ್ನ ಕಡಿ ನಿಂಗ ಚಾ ಕುಡ್ಯಾಕ ರೊಕ್ಕ ಇಲ್ಲ, ನಿಂಗೇನ ಸೀಟಪಾ ಅಲ್ಲಿ?’ ಎಂದಳು ರಾಣಿ

‘ಏ ಹಂಗ ಐತಿ ಅಲ್ಲಿ, ನ್ಯೂಟ್ರಲ್ ಕ್ಯಾಂಡಿಡೇಟ್ ಹುಡಕಕತ್ತಾರಂತ ಸುದ್ದಿ ಟಿವ್ಯಾಗ ನೋಡಿನೇ ನಾ ಹೋಗಿದ್ನಿ ಅಲ್ಲಿ’ ಎಂದ ಬುಕಡ್ಯಾ

‘ ಏನ ಅಲ್ಲೇಪಾಕ ಮಾರಾಕ ಹೋಗಿದ್ದೇನಲ್ಲಿ? ಅಲ್ಲಿ ಕೋಟಿ ಕುಳಗಳು ಒದ್ದಾಡಕತ್ತಿದ್ರು ಟಿಕೇಟ್ ಸಲಾಗಿ, ನೀ ಬ್ಯಾರೇ ಅಡ್ಡ ಬಂದೇನ ಮಂಗ್ಯಾನಗತ್ಲೆ?’ ಎಂದ ಗುಡುಮ್ಯಾ

‘ಏ ಖರೇನೇ ನಂಗ ಅಲ್ಲಿ ಸೀಟಿನ ಯುವಸ್ಥಾ ಆಗಿತ್ತು, ಅಷ್ಟೊತ್ತಿಗಿ ಈ ಬಾಗಲಕೋಟಿ ಗದ್ಲ ಎತ್ತು ನೋಡು’ ಅಂದ ಬುಕುಡ್ಯಾ

‘ಏ ಹೋಗ್ಲಿ ಬಿಡ್ರಪಾ ಅಂವಂದೇನ ಹಚ್ಚಿರಿ, ಈ ಮರಿ ಬಂಡೆ ಮತ್ತ ಹೃದಯೇಶ್ವರನ ಕಾಳಗ ರೋಚಕ ಐತಿ ನೋಡ್ರಿ’ ಎಂದಳು ರಾಶಿ



‘ಏ ಅಲ್ಲಿ ಜಂಗಿ ನಿಕಾಲಿ ಕುಸ್ತಿ ಐತಿ, ಹಂಗೇ ಬಳ್ಳಾರಿ ಗಣಿ ಧಣಿ, ‘ತವರಿಗೆ ಬಾ ತಂಗಿ ‘ಅಂತ ಮತ್ತ ಹೊಳ್ಳಿ ಬಂದಾನು’ ಎಂದ ಶೌರಿ

‘ರಾಜ್ಯಸಭಾ ಎಲೇಕ್ಷನ್ಕ ‘ಕೈ’ಯಪ್ಪಾ, ಈಗ ಕಮಲೇಶ್ವರ ಸುಪ್ರಭಾತ! ಹಂಗೈತಿ ಜನ್ನಿ ಕತಿ’ ಅಂದ ಟುಮ್ಯಾ

‘ ಎಲ್ಲಾ ‘ಶ್ಯಾಣ್ಯಾ’ನ ಮಹಿಮಾ, ಅಂವಾ ಇವಗ ಏನ ‘ಗ್ಯಾರಂಟಿ’ ಕೊಟ್ಟಾನೇನ ಯಾರಿಗಿ ಗೊತ್ತ?’ ಅಂದ ರಬಡ್ಯಾ

‘ಏ ನಿಮ್ಮ ಬ್ಯಾರೇ ಗ್ಯಾರಂಟಿ ಇದ್ರ, ನಮ್ಗ ನಮ್ಮ ‘ನಮೋ’ನೇ ದೊಡ್ಡ ಗ್ಯಾರಂಟಿ ಅಂತ ಅನಾಕತ್ತಾರು ಆ ಮೂಲಿಮನಿ ಕಮಲಕ್ಕನ ಮನ್ಯಾಗ’ ಅಂದಳು ರಾಶಿ

‘ಎಲ್ಲಾರೂ ಕ್ಯಾಂಡಿಡೇಟ ಹಾಕೂದ್ರಾಗೇ ಹೈರಾಣ ಆಗ್ಯಾರು’ ಎಂದ ಕಾಕಾ

‘ಎಲ್ಲಿ ನೋಡಿದಲ್ಲಿ ಭಿನ್ನಮತ, ಗೋಬ್ಯಾಕ.......ಅಂತ ಶುರು ಆಗಿತ್ತು ನೋಡು’ ಎಂದ ಶೌರಿ

‘ಕುಂದಾ ನಗರದಾಗ ಷಟ–ರ್ ಎತ್ಯಾರು, ಚಿಕ್ಕ ಓಡಿಯಾಗ ಚಿಕ್ಕ ಹುಡುಗಿ ಪ್ರಚಾರ ಶುರು ಮಾಡೈತಿ, ಬಾಗಿಲು ತೆಗೆದು ಕೋಟೆ ಹೊಕ್ಕೊಂಡಾಳು ಸಹಕಾರಿ ಪುತ್ರಿ ‘ ಎಂದಳು ರಾಣಿ

‘ಬೆಣ್ಣೆನಗರಿಯ ಶ್ಯಾಮನ ಊರಿನ ಸಾವ್ಕಾರ ‘ಗಾಯತ್ರಿ’ ಮಂತ್ರ ಹೇಳಿ, ಹೆಂಗಸೂರು ಅಡಗಿ ಮನ್ಯಾಗೇ ಇರಬೇಕು ಅಂತ ಅಂದಾನು’ ಅಂದ ಬುಕಡ್ಯಾ

‘ಏ ಆ ಮುತ್ಯಾ ಹೆಣ್ಮಕ್ಕಳಂದ್ರ ಏನಂತ ತಿಳಿದಾನು’? ಅಂತ ರಾಣಿ ಒಮ್ಮೆಲೆ ರಾಂಗ್ ಆದಳು

‘ಏ ಹೆಣ್ಮಕ್ಳು ಭಾರಿ ಸ್ಟ್ರಾಂಗ್ ಗುರು, ಮೊನ್ನೆ ಆ ಜೇವರ್ಗಿಯ ಕೊಳಕೂರ ಕುವರಿ ಶ್ರೇಯಾಂಕ ಪಾಟೀಲ ಹ್ಯಾಂಗ ಆಡ್ಯಾಳು ಗೊತ್ತೈತಿಲ್ಲ?’ ಎಂದು ಮೆಚ್ಚುಗೆಯಿಂದ ಹೇಳಿದ ಕಾಕಾ

‘ಏ ಹೌಂದು ನಾಕ ವಿಕೆಟ್ ತಗೊಂಡು ಕ್ರಿಕೇಟ್ಕ ಘನತೆ ತಂದ ಕೊಟ್ಟಾಳು’ ಎಂದ ಟುಮ್ಯಾ

‘ಶಿಮೊಗ್ಗ ಏನ ಅಂತೇತಿ? ಸಿಟ್ಟೂರಿ ಮಗ ಮತ್ತ ‘ಬಂ’ಪುತ್ರಿ ಪರಸ್ಪರ ಪಾಶುಪತಾಸ್ತ್ರ ಹೂಡ್ಯಾರಂತ?’ ಕೇಳಿದ ಬುಕುಡ್ಯಾ

‘ನಡಬರಕ ಈಸ್ಪೂರಿ ಲಡೆಂಗೆ ಹಮ್ ಇದರ್ ಅಂತ ಶುರು ಹಚ್ಚಿದ್ದ ಗಾನಾ ಇನ್ನಾ ಮುಗ್ಯಾವಲ್ತು ನೋಡು’ ಅಂದಳು ರಾಣಿ

‘ಏ ಅದು ಹಂಗ ಸರಳ



ಮುಗ್ಯಾಕ ಸಾಧ್ಯ ಇಲ್ಲ ಬಿಡು, ಸಿಟ್ಟೂರಿ ಜೇಷ್ಠಮರಿನ್ನ ಮಲಗಿಸೇ ಮನಿಗ ಹೊಕ್ಕಿನಿ ಅಂತ ಅಂದಾನು ಈಸ್ಪೂರಿ’ ಎಂದ ಟುಮ್ಯಾ

‘ಈಸ್ಪೂರಿನ್ನ ಶ್ಯಾಣ್ಯಾ ದಿಲ್ಲಿಗಿ ಬಾರಪಾ ಕುಂತು ಮಾತಾಡೂಮು ಅಂತ ಕರದಿದ್ನ, ಇಂವಾ ಇದ್ರ ಊರ ಮಂದಿ ಮುಂದ ಡಂಗರಾ ಹೊಡ್ದು ದಿಲ್ಲಿಗಿ ಹ್ವಾದ್ರ, ನೋ ಎಂಟ್ರಿ ಬೋರ್ಡ್ ಹಾಕಿ ಮಕ್ಕೊಂಡಿದ್ದ ಶ್ಯಾಣ್ಯಾ’ ಎಂದ ಬುಕುಡ್ಯಾ

‘ ಅದಕ್ಕ ಅಂಜಲಿಲ್ಲ ಅಳಿಕಲಿಲ್ಲ ನಮ್ಮ ಈಸ್ಪೂರಿ, ಮಳ್ಯಾಗ ತೋಸಿಕೊಂಡವಗ ಯಾತರ ಅಂಜಕಿ? ನನ್ಗ ಫೈಟ್ ಮಾಡಿ ಗೆದ್ದ ಬಾ, ಆ ಸಿಟ್ಟೂರಿ ಗ್ಯಾಂಗ್ ಅಡ್ಡಡ್ಡ ಮಲಿಗಿಸಿ ಬಾ ಅಂತ ಸೂಚನಾ ಕೊಟ್ಟತಿ ಟಕಳು ಆ್ಯಂಡ್ ಗ್ಯಾಂಗ್ ಅಂತ ಎಲ್ಲಾ ಚಾನೆಲ್ದವರಿಗಿ ಹೇಳೇ ಫೈಟ್ ಹತ್ತಿದಾ ಈ ಅಂಜದ ಗಂಡು’ ಎಂದ ರಬಡ್ಯಾ

‘ಈ ಕಡಿ ಹಿಂಪುಲಿತ್ತಾಳ, ಆ ಕಡೆ ಅಂಜದ ಗಂಡು ಹೀಂಗ ಗುಮ್ಮಿದ್ರ.....ಎಲ್ಲಿ ಹೋಗಿ ಯಾ ಬಂಡೆಗೆ ತಲಿ ಬಡಕೊಬೇಕು ಸಿಟ್ಟೂರಿ?’ ಎಂದ ಟುಮ್ಯಾ

‘ಏ ಆ ಬಂಡೆ ಕನಕಪುರದ ಕಡೆ ಹೋಗೇತಿ, ಇಂವಗೆಲ್ಲಿ ಸಿಕ್ಕೈತಿ ತಲಿಗೆ ಹೊಡ್ಕೊಳ್ಳಿಕಿ?’ ಎಂದಳು ರಾಶಿ

‘ಆ ಕಡಿ ಕುಮ್ಮಿ ಅಳು,ಈ ಕಡಿ ಕುಮ್ಮಿ ಪುತ್ರ ಆ್ಯಂಡ್ ಡಾಕ್ಟರ್ ಚಿಕ್ಕಬಳ್ಳಾಪುರ ಅಳು!.........ಆಹಾಹಾ .... ಸೆಂಟಿಮೆಂಟ್ ಪಿಚ್ಚರ್’ ಅಂದಳು ರಾಣಿ

‘ ಎಲ್ಲಾ ಕಡಿ ಫೈಟಿಂಗ್ ಶುರು ಆಗ್ಯೆತಿ, ಅಭಿ ಪಿಚ್ಚರ ಬಾಕಿ ಹೈ’ ಎಂದ ಬಾಶಾ

‘ಮಂಡ್ಯ ಗೌಡ್ತಿನ್ನ ಕುಮ್ಮಣ್ಣ ಭೆಟ್ಯಾದ, ಗೌಡ್ತಿ ಕಮಲ ಮುಡಿದ್ಳು, ದರ್ಶನ ಬಂದ ಯಶ್ ಬರಲಿಲ್ಲ ಶೆಟಗೊಂಡಾನಲಾ’’ ಎಂದು ಕೇಳಿದ ಬುಕಡ್ಯಾ

‘ಯಾರಿಗಿ ಯಾರೋ ಮೈಲಾರಲಿಂಗಾ ಹಂಗ ಆಗೇತಿಲ್ಲಿ’ ಅಂದಳು ರಾಶಿ

‘ಸಬ್ ಕೋ ಸನ್ಮತಿ ದೇ ಭಗವಾನ್’ ಅಂತ ಕಾಕಾ ಅಂದ

‘ಕೇಜ್ರಿನ್ನ ಜೇಲಿಗಿ ಹಾಕ್ಯಾರಂತಲಾ ದಿಲ್ಯಾಗ’ ಅಂತ ಕೇಳ್ದ

ಕಾಳ್ಯಾ

‘ಹಗರಣಗಳ ದುಡ್ಡು ಒಯ್ದು ಬಡವರಗಿ ಹಾಕ್ಕಿನಿ ಅಂದಾನು ನಮೋ’ ಅಂತ ಹೇಳಿದ ರಬಡ್ಯಾ

‘ತಂಗಳಗಿಡಿ ಎಲ್ಲಾರ ಕಪಾಳಕ ಹೊಡಿರಿ ಅಂತ ಅಂದತಿ ಅಂತಲಾ ಹೌದ?’ ಕೇಳಿದ ಗುಡುಮ್ಯಾ

‘ಕನಕಗಿರಿಯ ಕಂದ ಎಲ್ಲಾ–ರಿಗೂ ಕಪಾಳಕ್ಕ ಬಾರಿಸಿರಿ



ಅನ್ನೂದನ್ನ ದೊಡ್ಡ ಡೈಲಾಗ್ ಮಾಡ್ಕಂಡರಂತ’ ಅಂದ ಗುಂಡ್ಯಾ

‘ಕರಿಮಣಿ ಮಾಲಿಕ ನೀನಲ್ಲಾ ನೀನಲ್ಲಾ ಅಂತ ರೇಣು ಹಾಡಕತ್ತಾನ ಹರ ಹರಾ ಶ್ರೀಸಿದ್ಧೇಶ್ವರಾ’ ಅಂತ ಹೇಳಿ ನಕ್ಕ

ಬುಕಡ್ಯಾ

‘ರೇಣು ಆ್ಯಂಡ್ ಕಂಪನಿಗಿ ಮಸ್ತ ಆಪರೇಶನ್ ಮಾಡಿ ಹೋಗ್ಯಾನ ಶ್ಯಾಣ್ಯಾ ಬೆಂಗಳೂರಿಗಿ ಬಂದು’ ಎಂದು ನಕ್ಕ ಟುಮ್ಯಾ



‘ಯಾರರೇ ಏನ್ಯಾಕ ಅನ್ಲಿ ಮಿಸ್ಸಳಬಾಜಿಗಳಾ, ಈಗ ಸೀಟಿನ ಮಾಲಕ ಬುಕಡ್ಯಾ ಎಲ್ಲಾರಿಗೂ ಚಾ ಕುಡಸ್ತಾನ ಎಲ್ಲಾರೂ ಬರ್ರಿ ಬರ್ರಿ’ ಅಂದ ಗುಂಡ್ಯಾ

‘ನಂಗ ಸೀಟ ಸಿಕ್ಕಿತ್ತಂದ್ರ ಈಗಲೇ ಚಾ ಕುಡಸ್ತಿನಿ, ಇಲ್ಲಾಂದ್ರ ನೋ ‘ಅಂತಂದ ಬುಕಡ್ಯಾ

‘ನಡ್ರಿ ಎಲ್ಲಾರೂ ಸೇರಿ ಇವಗ ಸೀಟ ಕೊಡಸೂಣ ಬರ್ರಿ’ ಅಂ–ದಳು ರಾಣಿ

‘ಯಾವ ಸೀಟು?’

‘ಅದೇ ಡಕ್ಕಂಪಲ್ಲಿ ಬಸ್..... ಡಕೋಟಾ ಎಕ್ಸಪ್ರೆಸ್ ಸೀಟು’

ಅಂತ ರಾಣಿ ನಕ್ಕಳು

‘ಬುಕುಡ್ಯಾ ಗಡಗಡ ನಡಗುತ್ತ ಹೋದ ಲಾಲೂನಗತ್ಲೆ’

# ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಪ್ರವಾಸ ವಿವರ

ಉದಯರಶ್ಮಿ ನ್ಯೂಸ್

ವಿಜಯಪುರ: ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಅವರು, ಏಪ್ರಿಲ್ 10 ರಿಂದ ಏಪ್ರಿಲ್ 15ರ ವರೆಗೆ ವಿಜಯಪುರ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದು, ನಾನಾ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

ಸಚಿವರು ಏಪ್ರಿಲ್ 09 ರಂದು ರಾತ್ರಿ ವಿಜಯಪುರಕ್ಕೆ ಆಗಮಿಸಿ ವಾಸ್ತವ್ಯ ಹೂಡಲಿದ್ದಾರೆ.

ಏಪ್ರಿಲ್ 10 ರಂದು ಬುಧವಾರ ಬೆಳಿಗ್ಗೆ 9.30ಕ್ಕೆ ವಿಜಯಪುರದಿಂದ ಹೊರಟು ಬೆ.10ಕ್ಕೆ ಕಾರಜೋಳಕ್ಕೆ ಆಗಮಿಸಲಿರುವ ಅವರು, ಕೃಷ್ಣಾ ನದಿಯಲ್ಲಿ ಮುಳುಗಿ ಮೃತಪಟ್ಟ ಕಾರಜೋಳ ಗ್ರಾಮದ ಬಾಲಕರಾದ ಸುದೀಪ ದೊಡ್ಡಮನಿ ಹಾಗೂ ಶ್ರೀಧರ ದೊಡ್ಡಮನಿ ಇವರ ಕುಟುಂಬಸ್ಥರ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳಲಿದ್ದಾರೆ. ಮಧ್ಯಾಹ್ನ 12ಕ್ಕೆ ಚಡಚಣ ಪಟ್ಟಣಕ್ಕೆ ಆಗಮಿಸಲಿರುವ ಸಚಿವರು, ಸಂಗಮೇಶ್ವರ ಮಂಗಲ ಕಾರ್ಯಾಲಯದಲ್ಲಿ ನಾಗಠಾಣ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯಲ್ಲಿ ಆಯೋಜಿಸಲಾಗಿರುವ ಲೋಕಸಭೆ ಚುನಾವಣೆ ಪ್ರಚಾರ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ಸಂಜೆ 4 ಗಂಟೆಗೆ ವಿಜಯಪುರ ನಗರದ ಸೋಲಾಪುರ ರಸ್ತೆಯಲ್ಲಿರುವ ಪಾಟೀಲ ಗಾರ್ಡೇನಿಯಾದಲ್ಲಿ ಆಯೋಜಿಸಲಾಗಿರುವ ನಾಗಠಾಣ ವಿಧಾನ ಸಭೆ ಕ್ಷೇತ್ರ ವ್ಯಾಪ್ತಿಯ ಚುನಾವಣೆ ಪ್ರಚಾರ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ರಾತ್ರಿ 7 ಗಂಟೆಗೆ ತೊರವಿಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಅವರು ಪಾಲ್ಗೊಳ್ಳಲಿದ್ದಾರೆ.

ಏಪ್ರಿಲ್ 11 ರಂದು ಗುರುವಾರ ಬೆಳಿಗ್ಗೆ 10 ಗಂಟೆಗೆ ರಂಜಾನ ಹಬ್ಬದ ಪ್ರಯುಕ್ತ ಸಾಮೂಹಿಕ ಪ್ರಾಥ–ರ್ನೆಯಲ್ಲಿ ಭಾಗವಹಿಸಲಿದ್ದಾರೆ.



ಏಪ್ರಿಲ್ 12 ರಂದು ಶುಕ್ರವಾರ ಬೆಳಿಗ್ಗೆ 9 ಗಂಟೆಗೆ ಮುಮ್ಮೆಟಿಗುಡ್ಡದ ಬಳಿ ಇರುವ ಅರ್ಜುನ ರಾಠೋಡ ಅವರ ತೋಟದಲ್ಲಿ ಆಯೋಜಿಸಲಾಗಿರುವ ಬಬಲೇಶ್ವರ ವಿಧಾನಸಭೆ ಕ್ಷೇತ್ರದ ಅರಕೇರಿ ಜಿ. ಪಂ. ವ್ಯಾಪ್ತಿಯ ಚುನಾವಣೆ ಪ್ರಚಾರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಸಂಜೆ 4 ಗಂಟೆಗೆ ಬಿಜ್ಜರಗಿ ಗ್ರಾಮದಲ್ಲಿರುವ ಶ್ರೀ ಸದ್ಗುರು ಶಿವಾನಂದ ಪ್ರಾಥ–ಮಿಕ ಶಾಲೆ ಆವರಣದಲ್ಲಿ ಕನಮಡಿ ಜಿ. ಪಂ. ವ್ಯಾಪ್ತಿಯ ಲೋಕಸಭೆ ಚುನಾವಣೆ ಪ್ರಚಾರ ಸಭೆಯಲ್ಲಿ ಅವರು ಪಾಲ್ಗೊಳ್ಳಲಿದ್ದಾರೆ. ಸಂಜೆ 6.30ಕ್ಕೆ ತಿಕೋಟಾದಲ್ಲಿ ಹೊನವಾಡ ಜಿ. ಪಂ. ಹಾಗೂ ತಿಕೋಟಾ ಪ. ಪಂಚಾಯಿತಿ ವ್ಯಾಪ್ತಿಯ ಲೋಕಸಭೆ ಪ್ರಚಾರ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ರಾತ್ರಿ 9 ಗಂಟೆಗೆ ಬಸವನ ಬಾಗೇವಾಡಿ ತಾಲೂಕಿನ ಯರನಾಳ ಗ್ರಾಮದಲ್ಲಿ ಆಯೋಜಿಸಲಾಗಿರುವ ಪೂಜ್ಯ ಶ್ರೀ ಗುರುಸಂಗನಬಸವ ಮಹಾಸ್ವಾಮಿಗಳ ಜನ್ಮ ಸುವರ್ಣ ಮಹೋತ್ಸವ ಕಾರ್ಯಕ್ರದಮಲ್ಲಿ ಪಾಲ್ಗೊಳ್ಳಲಿದ್ದಾರೆ.

ಏಪ್ರಿಲ್ 13 ರಂದು ಶನಿವಾರ ಬೆಳಿಗ್ಗೆ 9 ಗಂಟೆಗೆ ಬಬಲೇಶ್ವರ ವಿಧಾನಸಭೆ ಕ್ಷೇತ್ರದ ಮಮದಾಪುರ ಜಿ. ಪಂ. ವ್ಯಾಪ್ತಿಯಲ್ಲಿ ಚುನಾವಣೆ ಪ್ರಚಾರ ಸಭೆಯಲ್ಲಿ ಸಚಿವರು ಪಾಲ್ಗೊಳ್ಳಲಿದ್ದಾರೆ. ಸಂಜೆ 4 ಗಂಟೆಗೆ ದೇವರ ಹಿಪ್ಪರಗಿ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯ ಬಂಡೆಪ್ಪನ ಸಾಲವಾಡಗಿ ಜಿ. ಪಂ. ವ್ಯಾಪ್ತಿಯಲ್ಲಿ ಲೋಕಸಭೆ ಚುನಾವಣೆ ಪ್ರಚಾರ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಸಂಜೆ 6 ಗಂಟೆಗೆ ದೇವರ ಹಿಪ್ಪರಗಿ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯ ಕುದುರಿ ಸಾಲವಾಡಗಿ ಜಿ. ಪಂ. ವ್ಯಾಪ್ತಿಯಲ್ಲಿ ಲೋಕಸಭೆ ಚುನಾವಣೆ ಪ್ರಚಾರ ಕೈಗೊಳ್ಳಲಿದ್ದಾರೆ.

ಏಪ್ರಿಲ್ 14 ರಂದು ರವಿವಾರ ಬೆಳಿಗ್ಗೆ 10.30ಕ್ಕೆ ವಿಜಯಪುರ ನಗರದ ಇಂಡಿ ರಸ್ತೆಯಲ್ಲಿ ಶ್ರೀ ಸಿದ್ಧೇಶ್ವರ ಆಸ್ಪತ್ರೆಯ ಉದ್ಘಾಟನೆ ಸಮಾರಂಭದಲ್ಲಿ ಸಚಿವರು ಪಾಲ್ಗೊಳ್ಳಲಿದ್ದಾರೆ.


ಏಪ್ರಿಲ್ 15 ರಂದು ಸೋಮವಾರ ವಿಜಯಪುರ ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ ಅವರು ನಾಮಪತ್ರ ಸಲ್ಲಿಸಿದ್ದು, ಅಂದು ಬೆಳಿಗ್ಗೆ 11 ಗಂಟೆಗೆ ವಿಜಯಪುರ ನಗರದ ಶ್ರೀ ಸಿದ್ಧೇಶ್ವರ ದೇವಸ್ಥಾನದಿಂದ ಮೆರವಣಿಗೆಯಲ್ಲಿ ಹೊರಟು ಜಿಲ್ಲಾಧಿಕಾರಿ ಕಚೇ–ರಿಯಲ್ಲಿ ನಡೆಯಲಿರುವ ನಾಮಪತ್ರ ಸಲ್ಲಿಕೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಮಧ್ಯಾಹ್ನ 1 ಗಂಟೆಗೆ ಜಿಲ್ಲಾ ಕಾಂಗ್ರೆಸ್ ಪಕ್ಷದ ಪ್ರಮುಖರೊಂದಿಗೆ ಸಚಿವ ಎಂ. ಬಿ. ಪಾಟೀಲ ಸಭೆ ನಡೆಸಲಿದ್ದಾರೆ ಎಂದು ಸಚಿವರ ಕಚೇರಿ ಮಾಧ್ಯಮ ಪ್ರಕಟಣೆಯಲ್ಲಿ ಮಾಹಿತಿ ನೀಡಲಾಗಿದೆ.

# ಏ.10 ರಂದು ದೀಕ್ಷಾದಿನ ಸಮಾರಂಭ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಮಹಾಜ್ಞಾನಿಗಳೂ, ಘನವಿದ್ವಾಂಸರೂ ಆದ ವಿದ್ಯಾಭೂಷಣ ಮುನಿಮಹಾರಾಜರು ದಿಗಂಬರ ದೀಕ್ಷೆಯನ್ನು ಪಡೆದು ಏ.10 ಕ್ಕೆ 15 ವರ್ಷಗಳು ಪೂರ್ಣಗೊಂಡು 16 ನೇ ವರ್ಷಕ್ಕೆ ಪಾದಾರ್ಪಣೆ ಮಾಡುತ್ತಿರುವ ಹಿನ್ನೆಲೆ ತಾಲೂಕಿನ ಸಮಸ್ತ ದಿಗಂಬರ ಜೈನ ಸಮಾಜ ಬಾಂಧವರು ಮತ್ತು ಪರಮಪೂಜ್ಯರ ಶಿಷ್ಯ ಬಳಗದ ವತಿಯಿಂದ ದೀಕ್ಷಾದಿನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಏ.10 ರಂದು ಬೆಳಿಗ್ಗೆ 9ಗಂಟೆಗೆ ಪಟ್ಟಣದ ಹಡಲಗೇರಿ ರಸ್ತೆಯಲ್ಲಿರುವ ಶ್ರೀ ಪದ್ಮಾವತಿ ದೇವಸ್ಥಾನದ ಸಮುದಾಯಭವನದ “ಶ್ರೀ ಗಣಪತ ರಾವ್ ಹಜಾರೆ ಸಭಾಮಂಟಪ” ದಲ್ಲಿ ಸಮಾರಂಭ ನಡೆಯಲಿದ್ದು, ತಾಲೂಕಿನ ಸಮಸ್ತ ದಿಗಂಬರ ಜೈನಸಮಾಜದ



ಶ್ರಾವಕ ಶ್ರಾವಕಿಯರು ಹಾಗೂ ಪರಮಪೂಜ್ಯ ಶ್ರೀ ವಿದ್ಯಾಭೂಷಣ ಮುನಿಮಹಾರಾಜರ ಶಿಷ್ಯ ಬಳಗ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಈ ಸಮಾರಂಭವನ್ನು ಯಶಸ್ವಿಗೊಳಿಸುವಂತೆ ಪ್ರಕಟಣೆ ತಿಳಿಸಿದೆ.

# ವಿಜಯಪುರ ಬಸ್ ನಿಲ್ದಾಣದಲ್ಲಿ ಮತದಾನ ಜಾಗೃತಿ

ಉದಯರಶ್ಮಿ ನ್ಯೂಸ್

ವಿಜಯಪುರ: ಸುಭದ್ರ ದೇಶ ನಿರ್ಮಾಣಕ್ಕೆ ಎಲ್ಲರೂ ಕಡ್ಡಾಯವಾಗಿ ಮತ ಚಲಾಯಿಸಬೇಕು. ಲೋಕಸಭೆ ಚುನಾವಣೆಯನ್ನು ಯಶಸ್ವಿಗೊಳಿಸಿ ಉತ್ತಮ ಆಡಳಿತ ಪಡೆಯಲು ನಾಗ–ರೀಕರ ಸಹಕಾರ ಪ್ರಮುಖವಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಶಿ ಆನಂದ ಹೇಳಿದರು.



ಅವರು ಜಿಲ್ಲಾ ಸ್ವೀಪ್ ಸಮಿತಿ ವಿಜಯಪುರ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಜಯಪುರ ಇವರ ಸಹಯೋಗದಲ್ಲಿ ಮಂಗಳವಾರ ನಗರದ ಕೇಂದ್ರ ಬಸ್ ನಿಲ್ದಾಣ ಮತ್ತು ಸ್ಯಾಟಲೈಟ್ ಬಸ್ ನಿಲ್ದಾಣಗಳಲ್ಲಿ ಲೋಕಸಭಾ ಚುನಾವಣೆ 2024 ರ ಹಿನ್ನೆಲೆಯಲ್ಲಿ ಮತದಾನದ ಜಾಗೃತಿ ಕಾರ್ಯಕ್ರಮದಲ್ಲಿ ಪ್ರಯಾಣಿಕರೊಂದಿಗೆ ಮಾಹಿತಿ ವಿನಿಮಯ ನೀಡಿ ಮಾತನಾಡಿದರು.

ಚುನಾವಣಾ ಆಯೋಗ ಗುರುತು ಮಾಡಿರುವ ದಾಖಲೆಗಳೊಂದಿಗೆ ಮತಗಟ್ಟೆಗೆ ತೆರಳಿ ಮತದಾನ ಮಾಡಬೇಕು. ಹಿರಿಯರು, ವಿಶಿಷ್ಟ ಚೇತನರಿಗೆ ಪ್ರಥಮ ಪ್ರಾಸ್ತ್ಯ ನೀಡಬೇಕು. ಯಾವುದೇ ಗೊಂದಲ ಉಂಟಾಗದಂತೆ ನಾಗರೀಕರು ಶಾಂತರೀತಿಯಿಂದ ಸಹಕರಿಸಿ ಜಿಲ್ಲೆಯಲ್ಲಿ ಶೇ.100 ರಷ್ಟು ಮತದಾನ ಆಗುವಂತೆ ಸಹಕರಿಸಬೇಕು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಸಿಇಓ ರವರು ಬಸ್ ನಿಲ್ದಾಣಗಳಲ್ಲಿ ಮತದಾನ ಜಾಗೃತಿ ಕುರಿತ ಪೋಸ್ಟರ್‌ಗಳನ್ನು ಗೋಡೆಗಳ ಮೇಲೆ ಅಂಟಿಸಿದರು. ಇದೇ ವೇಳೆ ಸಾರ್ವಜನಿಕರಿಗೆ, ಯುವ ಮತದಾರರಿಗೆ ಹಾಗೂ ಹಿರಿಯ ನಾಗರಿಕರಿಗೆ ಮತದಾನದ ಜಾಗೃತಿ ಕುರಿತು ಮಾಹಿತಿಯುಳ್ಳ ಕರಪತ್ರಗಳನ್ನು ಹಂಚುವ ಮೂಲಕ ಮತದಾನದ ಮಹತ್ವದ ಕುರಿತು ಅರಿವು ಮೂಡಿಸಿದರು.


ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿಯಾದ ಸಿ. ಆರ್ ಮುಂಡರಗಿ, ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳಾದ ರಾಮಣ್ಣ ಅಥಣಿ, ಯೋಜನಾ ಅಂದಾಜು ಮತ್ತು ಮೌಲ್ಯಮಾಪನಾಧಿಕಾರಿಗಳಾದ ಎ.ಬಿ ಅಲ್ಲಾಪೂರ, ವಿಜಯಪುರ ತಾಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಹೊಂಗಯ್ಯ, ಕೇಂದ್ರ ಬಸ್ ನಿಲ್ದಾಣ ಅಧಿಕಾರಿ ಜೆ. ಕೆ ಹುಗ್ಗೆಣ್ಣವರ, ಜಿಲ್ಲಾ ಎನ್.ಎಸ್.ಎಸ್ ಘಟಕದ ನೋಡೆಲ್ ಅಧಿಕಾರಿ ಪ್ರಕಾಶ ರಾಠೋಡ, ಜಿ.ಪಂ. ಎಎಸ್ಬೆ ರಾವ್ ಬಹಾದ್ದೂರ್ ಬಾಗವಾನ, ಜಿಲ್ಲಾ ಸ್ವೀಪ್ ಸಮಿತಿಯ ರಾಯಭಾ–ರಿಯಾದಂತಹ ಸಾಕ್ಷಿ ಹಿರೇಮಠ್ ಸೇರಿದಂತೆ ಪ್ರಯಾಣಿಕರು, ರಸ್ತೆ ಸಾರಿಗೆ ನಿಗಮದ ಸಿಬ್ಬಂದಿ ಉಪಸ್ಥಿತರಿದ್ದರು.



# ಸಾಧನೆಯು ಸಾಧಕನ ಸ್ವತ್ತೇ ವಿನಃ ಸೋಮಾರಿಯ ಸ್ವತ್ತಲ್ಲ

ಉದಯರಶ್ಮಿ ದಿನಪತ್ರಿಕೆ

ಯಾರು ಬದುಕಿನಲ್ಲಿ ಯಾವುದೇ ವಿಷಯದ ಕು–ರಿತಾಗಿ ಕಠಿಣ ಪರಿಶ್ರಮವನ್ನು ಮಾಡುತ್ತಾರೋ ಅವರು ಆಯಾ ಕ್ಷೇತ್ರದಲ್ಲಿ ಸಾಧಕರಾಗಿ ಮೂಡಿ ಬರುತ್ತಾರೆ. ಯಾರು ಸೋಮಾರಿಗಳಾಗಿ ಕಾಲಹರಣ ಮಾಡುತ್ತಾರೋ ಅವರು ಸಾಧಕರ ಸಾಲಿಗೆ ಸೇರಲು ಸಾಧ್ಯವಿಲ್ಲ ಎನ್ನುವುದು ಎಲ್ಲರಿಗೂ ತಿಳಿದಿರುವ ಸತ್ಯ. ಯಾವುದೇ ಶ್ರಮವನ್ನು ಹಾಕದೆ ಮಹಾನ್ ಸಾಧಕರಾಗಿ ಗುರುತಿಸಿಕೊಳ್ಳಲು ಯಾವುದೇ ಸುಲಭದ ದಾರಿಗಳು (ಶಾರ್ಟ್ಕಟ್) ಇಲ್ಲ ಎನ್ನುವುದನ್ನು ಎಲ್ಲರೂ ಅರಿಯಬೇಕಿದೆ.



– ಸಂತೋಷ್ ರಾವ್ ಪೆರ್ಮುಡ, ಪೆರ್ಮುಡ ಮನೆ, ಪಟ್ರಮೆ ಗ್ರಾಮ ಮತ್ತು ಅಂಚೆ ಬೆಳ್ತಂಗಡಿ ತಾಲೂಕು,

ಒಂದು ವ್ಯವಸ್ಥೆಯಲ್ಲಿ ಒಬ್ಬರು ಕಠಿಣ ಪರಿಶ್ರಮಿ ಮತ್ತು ಇನ್ನೊಬ್ಬರು ಸೋಮಾರಿ ಇದ್ದು, ಪರಿಶ್ರಮಿಯ ನಿರಂತರ ಸಾಧನೆಗಳು ಮತ್ತು ಸದಾ ಗುರುತಿಸಿಕೊಳ್ಳುವ ರೀತಿಯನ್ನು ನೋಡಿದಾಗ ಸೋಮಾರಿಗೆ ತಾನು ಸಾಧನೆಯಲ್ಲಿ ಹಿಂದೆ ಉಳಿದಿರುವುದಕ್ಕೆ ಬೇಸರ ಆಗುವುದು ಸಹಜ. ಈಗ ಸೋಮಾರಿಯು ಪರಿಶ್ರಮಿಯನ್ನು ಮೀರಿ ಸಾಧಕನಾಗಲು ಏನು ಮಾಡಬೇಕೆಂಬ ಪ್ರಶ್ನೆಯು ಸೋಮಾರಿಯ ಮನಸ್ಸಿನಲ್ಲಿ ಮೂಡುತ್ತದೆ. ಕೆಲವು ಸೋಮಾ–ರಿಗಳು ತಮ್ಮಿಂದ ಮುಂದಿರುವ ಪರಿಶ್ರಮಿ ಸಾಧಕರಿಗಿಂತ ದೊಡ್ಡವರಾಗಿ ಗುರುತಿಸಿಕೊಳ್ಳಲು ಪರಿಶ್ರಮಿಗಳ ಸಾಧನೆಯ ಹಾದಿಗೇ ಅಡ್ಡಗಾಲು ಹಾಕಿ ಅವರಿಗೆ ಕೊಡಬಾರದ ತೊಂದರೆಯನ್ನು ಕೊಟ್ಟು, ಅವರ ಸಾಧನೆಯ ವೇಗಕ್ಕೆ ನಿಯಂತ್ರಣವನ್ನು ಹಾಕುವ ಮೂಲಕ ತಮ್ಮಿಂದಲೂ ಹಿಂದೆ ಬೀಳುವಂತೆ ಮಾಡುತ್ತಾರೆ ಮತ್ತು ಇದರಿಂದ ತಾವು ಗುರುತಿಸಿಕೊಳ್ಳುತ್ತಾರೆ. ಆದರೆ ಇದು ನಿಜವಾಗಿಯೂ ಒಂದು ವ್ಯವಸ್ಥೆ ಮತ್ತು ವ್ಯಕ್ತಿಯ ಬೆಳವಣಿಗೆಯ ದೃಷ್ಟಿಯಿಂದ ಉತ್ತಮವೇ ಎಂದು ಕೇಳಿದರೆ ಖಂಡಿತಾ ಅಲ್ಲ.




ಏಕೆಂದರೆ ಸೋಮಾರಿಯು ತಾನು ಕಠಿಣ ಪರಿಶ್ರಮಿಗಿಂತ ಹೆಚ್ಚಿನ ಪ್ರಯತ್ನವನ್ನು ಮಾಡಿ ಗುರುತಿಸಿಕೊಂಡಿಲ್ಲ. ಬದಲಿಗೆ ತನಗಿಂತ ಕಡಿಮೆ ಸಾಧನೆಯನ್ನು ಕಠಿಣ ಪರಿಶ್ರಮಿಯು ಮಾಡುವಂತೆ ಆತನಿಗೆ ತೊಂದರೆ ಕೊಟ್ಟು ತಾನು ಈ ಹಿಂದೆ ಇದ್ದಂತೆಯೇ ಇದ್ದು ಗುರುತಿಸಿಕೊಳ್ಳುವ ಕೆಲಸವನ್ನು ಮಾಡಿದ್ದಾನೆ.

ಇಲ್ಲಿ ಸೋಮಾರಿಯು ಪರಿಶ್ರಮಿಯ ಶ್ರಮ ಮತ್ತು ಬದ್ಧತೆಯನ್ನು ಮೀರಿ ನಿಲ್ಲಲು ಯಾವುದೇ ವಿಶೇಷ ಶ್ರಮವಾಗಲೀ, ಕೆಲಸದ ಯಶಸ್ಸಿನ ಯೋಜನೆಯನ್ನು ಆಗಲೀ ಮಾಡಿಲ್ಲ. ಬದಲಿಗೆ ಪರಿಶ್ರಮಿಯ ಓಡುವ ಕುದುರೆಯ ಕಾಲನ್ನು ಮುರಿದು ಅಥವಾ ಕಾಲಿನ ಲಾಳವನ್ನು ಕಿತ್ತು ನಿಧಾನವಾಗಿ ಓಡುತ್ತಿರುವ ಸೋಮಾರಿಯ ಕುದುರೆಯು ತನ್ನದೇ ಸಹಜವಾದ ವೇಗದಲ್ಲಿ ಗೆಲುವಿನ ಗೆರೆಯನ್ನು ತಲುಪುವಂತೆ ಮಾಡಲಾಗಿದೆ. ಇದ–ರಿಂದ ಸೋಮಾರಿಯ ಕುದುರೆಯ ಓಡುವ ವೇಗವು ಪರಿಶ್ರಮಿಯ ಕುದುರೆಯ ವೇಗಕ್ಕಿಂತ ಕಿಂಚಿತ್ತೂ ಹೆಚ್ಚಾಗಿಲ್ಲ ಮತ್ತು ಹಾಗೆಯೇ ಇತ್ತು ಅಥವಾ ವೇಗವು ಮತ್ತಷ್ಟು ಕಡಿಮೆ ಆಗಿತ್ತು.



ಓಡುವ ಕುದುರೆಯನ್ನು ಓಡದಂತೆ ಅದರ ವೇಗಕ್ಕೆ ಕಡಿವಾಣವನ್ನು ಹಾಕಿ, ನಿಧಾನವಾಗಿ ಓಡುವ ಕುದುರೆಯನ್ನು ಗೆಲ್ಲುವಂತೆ ಮಾಡುವ ವಾಮಮಾರ್ಗವನ್ನು ಅನುಸರಿಸುವ ಬದಲಿಗೆ ಸೋಮಾರಿಯು ಪರಿಶ್ರಮಿಯ ಶ್ರಮಕ್ಕಿಂತ ಹೆಚ್ಚಿನ ಶ್ರಮವನ್ನು ಹಾಕಿ ಯಾ ವಿಭಿನ್ನವಾದ ಕಾರ್ಯಯೋಜನೆಯನ್ನು ಹಾಕಿಕೊಂಡು ಪರಿಶ್ರಮಿಯನ್ನು ಹಿಂದಿಕ್ಕಿ ಮುಂದೆ ಸಾಗಿ ಯಶಸ್ಸನ್ನು ತನ್ನದಾಗಿ ಮಾಡಿಕೊಂಡಾಗ ಮಾತ್ರ ವ್ಯವಸ್ಥೆಯಲ್ಲಿ ಇಬ್ಬರು ಸಾಧಕರು ಹಾಗೂ ಪೈಪೋಟಿದಾರರು ಮೂಡಿ ಬರಲು ಸಾಧ್ಯ ಆಗುತ್ತದೆ.

ಉದಾಹರಣೆ: 6 ಸೆಂ.ಮೀ ಮತ್ತು 4 ಸೆಂ.ಮೀ ಅಳತೆಯ ಎರಡು ಸರಳ ರೇಖೆಗಳ ಪೈಕಿ ಯಾವುದು ಉದ್ದವಿದೆ ಎಂದರೆ ಮೊದಲಿನದ್ದು ಸಹಜವಾಗಿಯೇ ಉದ್ದವಿದೆ ಮತ್ತು ಎರಡನೆಯದ್ದು ಅಳತೆಯಲ್ಲಿ ಸಹಜವಾಗಿಯೇ ಗಿಡ್ಡವಿದೆ ಎನ್ನಬಹುದು. ಈಗ ಎರಡೂ ಸರಳರೇಖೆಗಳು ಅಳತೆಯಲ್ಲಿ ಪರಸ್ಪರ ಸಮಾನ ಆಗಬೇಕು ಎಂದರೆ ಏನು ಮಾಡಬೇಕು? ಇದಕ್ಕೆ ಎರಡು ಸಾಧ್ಯತೆಗಳು ಇವೆ. ಮೊದಲನೆಯ ಸಾಧ್ಯತೆಯಲ್ಲಿ 6 ಸೆಂ.ಮೀ ಅಳತೆಯ ರೇಖೆಯನ್ನು 2 ಸೆಂ.ಮೀ ಕತ್ತರಿಸಿ 4 ಸೆಂ.ಮೀ ಅಳತೆಯ ರೇಖೆಗೆ ಸಮಾನ ಮಾಡುವುದು. ಎರಡನೆಯ ಸಾಧ್ಯತೆಯಲ್ಲಿ 4 ಸೆಂ.ಮೀ ಅಳತೆಯ ರೇಖೆಯನ್ನು 2 ಸೆಂ.ಮೀ ಹೆಚ್ಚಿಸಿ 6 ಸೆಂ.ಮೀ ಅಳತೆಯ ರೇಖೆಗೆ ಸಮಾನ ಮಾಡುವುದು. ಈ ಎರಡು ರೀತಿಯ ಸಾಧ್ಯತೆಗಳಲ್ಲಿ ಎರಡನೆಯ ವಿಧಾನವು ಒಂದು ವ್ಯವಸ್ಥೆಯ ಅಭಿವೃದ್ಧಿ ಹಾಗೂ ಬೆಳವಣಿಗೆಯ ದೃಷ್ಟಿಯಿಂದ ಉತ್ತಮ. ಏಕೆಂದರೆ ಅಳತೆಯಲ್ಲಿ ಹೆಚ್ಚು ಸಾಧನೆಯನ್ನು ಮಾಡಿದ ಮೊದಲನೆಯ ಸರಳ ರೇಖೆಯನ್ನು ಕಡಿಮೆ ಸಾಧನೆ ಮಾಡಿದ ರೇಖೆಯ ಅಳತೆಗೆ ಕುಂಠಿತಗೊಳಿಸಿ ಎರಡನ್ನೂ ಸಮಾನ ಮಾಡುವುದಕ್ಕಿಂತ ಕಡಿಮೆ ಸಾಧನೆ ಮಾಡಿದ ರೇಖೆಯನ್ನು ಹೆಚ್ಚು ಸಾಧನೆ ಮಾಡಿದ ರೇಖೆಯ ಮಟ್ಟಕ್ಕೆ ಹೆಚ್ಚಿಸುವುದು ಉತ್ತಮ. ಇದರಿಂದ ಧನಾತ್ಮಕವಾದ ಸಾಧನೆ ಆಗಲು ಸಾಧ್ಯವಾಗುತ್ತದೆ. ಆದ್ದರಿಂದ ಇತರರ ಸಾಧನೆಯನ್ನು ಕಂಡು ಅಯ್ಯೋ ನನ್ನಿಂದ ಆಗಲಿಲ್ಲವಲ್ಲಾ ಎಂದು ಅಸೂಯೆ ಪಡುವ ಬದಲು ತನ್ನ ಸಾಮರ್ಥ್ಯವನ್ನು ಹೆಚ್ಚಿಸಿಕೊಂಡು, ವಿಭಿನ್ನ ಕಾರ್ಯತಂತ್ರದ ಮೂಲಕ ಸ್ವ ಸಾಧನೆಯ ಕಡೆಗೆ ಹೆಚ್ಚಿನ ಗಮನವನ್ನು ಕೊಡಬೇಕು.



### 800 ಮೀಟರ್ ರನ್ನಿಂಗ್ ಮಾಡಿ ಮತದಾನ ಜಾಗೃತಿ ಮೂಡಿಸಿದ ಜಿ.ಪಂ ಸಿಇಓ ರಿಶಿ ಆನಂದ

# ಸದೃಡ ದೇಶದ ನಿರ್ಮಾಣಕ್ಕೆ ಯುವಶಕ್ತಿ ಕೊಡುಗೆ ಅನನ್ಯ



**ಉದಯರಶ್ಮಿ ನ್ಯೂಸ್**

ವಿಜಯಪುರ: ಒಂದು ದೇಶದ ಶಕ್ತಿಶಾಲಿ ಸಂಪನ್ಮೂಲ ಎಂದರೆ ಅದು ಯವಶಕ್ತಿ. ದೇಶಕ್ಕೆ ಯುವಕರ ಕೊಡುಗೆ ಅತ್ಯಂತ ಮಹತ್ವದಾಗಿದೆ. ದೇಶದ ಭವಿಷ್ಯ ನಿರ್ಮಾಣ ಕಾರ್ಯಕ್ಕೆ ಎಲ್ಲಾ ಯುವಕರು ಲೋಕಸಭಾ ಚುನಾವಣೆಯಲ್ಲಿ ಪಾರದರ್ಶಕ ಹಾಗೂ ಮುಕ್ತವಾಗಿ ಮತದಾನ ಮಾಡುವ ಮೂಲಕ ಸದೃಡ ದೇಶ ನಿರ್ಮಾಣ–ಕ್ಕೆ ಕಾರಣಿಭೂತರಾಗಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಿಶಿ ಆನಂದ ಹೇಳಿದರು.

ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಪಂಚಾಯಿತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವಿಜಯಪುರ ಇವರ ಸಹಯೋಗದಲ್ಲಿ ನಗರದ ಡಾ. ಬಿ. ಆರ್ ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಸೋಮುವಾರ ಕ್ರೀಡಾ ಇಲಾಖೆಯ ಯುವ ಕ್ರೀಡಾಪಟುಗಳೊಂದಿಗೆ ನಡೆದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಆಟವನ್ನು ಗೆಲ್ಲಬೇಕಾದರೆ ಹೇಗೆ ಸತತ ಪರಿಶ್ರಮ ಪಡುತ್ತೇವೆಯೋ ಹಾಗೆ ಸ್ವಚ್ಚ ಹಾಗೂ ನ್ಯಾಯಸಮ್ಮತ ಆಡಳಿತ ನಿರ್ಮಾಣವಾಗಲು ಯೋಗ್ಯ ಅಭ್ಯರ್ಥಿಗಳ ಆಯ್ಕೆ ಮಾಡುವಲ್ಲಿ ಯುವಶಕ್ತಿ ಮುಂದಾಗಬೇಕು. ಅದಲ್ಲದೇ ತಮ್ಮ ಕುಟುಂಬ, ನೆರೆಹೊರೆಯವರಿಗೆ ಮತದಾನದ ಮಹತ್ವ ತಿಳಿಸಿ ಕಡ್ಡಾಯ ಮತದಾನ ಮಾಡುವಂತೆ ಪ್ರೋತ್ಸಾಹಿಸಬೇಕು ಎಂದರು.

ಮತದಾನ ಮಾಡುವ ಮೂಲಕ ನಿಮ್ಮದೇ ಆದ ಕೊಡುಗೆಯನ್ನು ನೀಡಬೇಕು. ಮೊಟ್ಟಮೊದಲ ಬಾರಿಗೆ ಮತದಾನ ಮಾಡುತ್ತಿರುವ ನೀವು ಯಾವುದೇ ಭಯವಿಲ್ಲದೆ, ನಿರ್ಭೀತರಾಗಿ ಮತದಾನ ಮಾಡಿ. ನೀವಷ್ಟೇ ಅಲ್ಲದೆ ಮೊದಲ ಬಾರಿಗೆ ಮತದಾನ ಮಾಡುತ್ತಿರುವ ನಿಮ್ಮ ಸ್ನೇಹಿತರಿಗೂ ಕೂಡ ಚುನಾವಣೆ ದಿನದಂದು ಮತದಾನ ಮಾಡಲು ಪ್ರೇರೇಪಣೆ ನೀಡಬೇಕು ಹಾಗೂ ಎಲ್ಲ ಮತದಾರರಿಗೆ ನೀವು ಮಾದ–ರಿಯಾಗಬೇಕು ಎಂದು ಕಿವಿಮಾತುಗಳನ್ನು ಹೇಳಿದರು.

ನಂತರ ಸಿಇಓ ರವರು ಎಲ್ಲ ಕ್ರೀಡಾಪಟುಗಳೊಂದಿಗೆ ಕ್ರೀಡಾಂಗಣದಲ್ಲಿ 800 ಮೀಟರ್ ರನ್ನಿಂಗ್ ಮಾಡುವ ಮೂಲಕ ಎಲ್ಲಾ ಕ್ರೀಡಾಪಟುಗಳಿಗೆ ಮಾದರಿಯಾದರು ಮತ್ತು ಕ್ರೀಡಾಪಟುಗಳ ಆತ್ಮಸ್ಥೈರ್ಯವನ್ನು ಹೆಚ್ಚಿಸಿದರು. ಈ ಸಂದರ್ಭದಲ್ಲಿ ಎಲ್ಲ ಕ್ರೀಡಾಪಟುಗಳು ಅತ್ಯಂತ ಉತ್ಸಾಹ ಮತ್ತು ಆಸಕ್ತಿಯಿಂದ ಸಿಇಓ ರವರೊಂದಿಗೆ ಬೆರೆತು ರನ್ನಿಂಗ್ ನಲ್ಲಿ ಭಾಗವಹಿಸಿದರು. ಇದೇ ರೀತಿ ಎಲ್ಲರೂ ಅತ್ಯಂತ ಉತ್ಸಾಹದಿಂದ ಹಾಗೂ ಸಂತಸದಿಂದ ಮತದಾನದ ದಿನದಂದು ತಪ್ಪದೆ ಕಡ್ಡಾಯವಾಗಿ ಮತದಾನ ಮಾಡಬೇಕೆಂದು ಕ್ರೀಡಾಪಟುಗಳನ್ನು ಹುರಿದುಂಬಿಸಿದರು.

ಬಳಿಕ ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಸಿ. ಆರ್. ಮುಂಡರಗಿ ಮಾತನಾಡಿ, ಪ್ರಪಂಚದಲ್ಲೇ ಅತ್ಯಂತ ಸದೃಢ ಪ್ರಜಾಪ್ರಭುತ್ವ ವ್ಯವಸ್ಥೆ ಹೊಂದಿದ ಭಾರತ. ಉತ್ತಮ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹೊಂದಿದ ದೇಶ ಎಂದು ಪ್ರಪಂಚವೇ ನಮ್ಮತ್ತ ಕೈ ಬೀಸಿ ಹೇಳುತ್ತದೆ. ಅದಕ್ಕಾಗಿ ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಕಾಪಾಡುವುದು ಮತ್ತು ಅಭಿವೃದ್ಧಿಪಡಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಮುಂಬರುವ ಲೋಕಸಭಾ ಚುನಾವಣೆ 2024ರಂದು ಕಡ್ಡಾಯವಾಗಿ ಮತ್ತು ಖಚಿತವಾಗಿ ಮತದಾನ ಮಾಡುವ ಮೂಲಕ ನಮ್ಮ ಜವಾಬ್ದಾರಿಯನ್ನು ನಿರ್ವಹಿಸೋಣ ಎಂದರು.

ಈ ಜಿಲ್ಲಾ ಸ್ವೀಪ್ ಸಮಿತಿಯ ರಾಯಭಾರಿ ರಾಜೇಶ್ ಪವಾರ್ ಮತದಾರರ ಪ್ರತಿಜ್ಞಾ ವಿಧಿ ಬೋಧಿಸಿದರು. ಸಾಕ್ಷಿ ಹಿರೇಮಠ ರವರು ಮತದಾನದ ಜಾಗೃತಿ ಕುರಿತ ಗೀತೆಗಳನ್ನು ಹಾಡುವ ಮೂಲಕ ಎಲ್ಲ ಕ್ರೀಡಾಪಟುಗಳಲ್ಲಿ ಮತದಾನದ ಕುರಿತು ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿಯ ಉಪ ಕಾರ್ಯದರ್ಶಿ ಬಿ. ಎಸ್. ಮೂಗನೂರಮಠ, ವಿಜಯಪುರ ತಾಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿ ಕೆ. ಹೊಂಗಯ್ಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಎಸ್. ಜಿ. ಲೋಣಿ, ಜಿಲ್ಲಾ ಎನ್.ಎಸ್.ಎಸ್ ಘಟಕದ ನೊಡೆಲ್ ಅಧಿಕಾರಿಗಳಾದ ಪ್ರಕಾಶ ರಾಠೋಡ, ಜಿಲ್ಲ ಸ್ವೀಪ್ ಸಮಿತಿಯ ರಾಯಭಾರಿ ಸಹನಾ ಕುಡಿಗನೂರ, ಜಿಲ್ಲೆಯ ಅಥ್ಲೆಟಿಕ್ ಕ್ರೀಡಾಕೂಟಗಳ ಕೋಚ್ ಗಳು, ಜಿಲ್ಲಾ ಪಂಚಾಯತಿಯ ಅಧಿಕಾರಿ ಮತು ಸಿಬ್ಬಂದಿಯವರು, ಕ್ರೀಡಾ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಪಿಆರ್‌ಓ ಮತ್ತು ಎಪಿಆರ್‌ಓ ಗಳಿಗೆ ತರಬೇತಿ

**ಉದಯರಶ್ಮಿ ನ್ಯೂಸ್**

ಇಂಡಿ: ಚುನಾವಣೆ ಆಯೋಗದ ಮಾರ್ಗಸೂಚಿಯ ಅನುಸಾರ ಕಾರ್ಯನಿರ್ವಹಿಸಬೇಕು ಎಂದು ಸಹಾಯಕ ಚುನಾವಣೆ ಅಧಿಕಾರಿ ಮತ್ತು ಕಂದಾಯ ಉಪವಿಬಾಗಾಧಿಕಾರಿ ಅಬೀದ್ ಗದ್ಯಾಳ ಹೇಳಿದರು.

ಪಟ್ಟಣದ ಆದರ್ಶ ಪ್ರೌಢಶಾಲೆಯಲ್ಲಿ ಲೋಕಸಭಾ ಚುನಾವಣೆ ಹಿನ್ನೆಲೆ ಎಲ್ಲ ಪಿಆರ್‌ಓ ಮತ್ತು ಎಪಿಆರ್‌ಓ ಇವರಿಗೆ ಚುನಾವಣೆ ತರಬೇತಿ ನೀಡುವ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಮಾಕ ಪೋಲ, ಅದರ ಕಾರ್ಯ ವಿಧಾನ,ಮತ್ತು ನಿಜವಾದ ಮತದಾನದ ಆರಂಭದ ಬಗ್ಗೆ ತಿಳಿಸಿದರು.

ಚುನಾವಣೆ ಪೂರ್ವ ಹೋದ ನಂತರ ಮಾಡುವ ಕಾಗದಗಳ ಮತ್ತು ವಿವಿಧ ನಮೂನೆ ಕಾಗದದ ಎಲ್ಲ ವಿವರ ಮತ್ತು ಇವಿಎಮ್, ವಿವಿಪ್ಯಾಡ ಕುರಿತು ಮಾಹಿತಿ ನೀಡಿದರು.

ಅದರಂತೆ 19 ಜನ ಮಾಸ್ಟರ್ ಟ್ರೇರ್ಸ ತರಬೇತಿದಾರರು ವಿವಿಧ ಕೋಣೆಗಳಲ್ಲಿ ಚುನಾವಣೆ ನಡೆಸುವ ಕುರಿತು ವಿವರವಾದ ಮಾಹಿತಿ ನೀಡಿದರು.

ತರಬೇತಿಯಲ್ಲಿ 379 ಪಿಆರ್‌ಓ ಮತ್ತು 554 ಎಪಿಆರ್‌ಓ ಭಾಗವಹಿಸಿ ಚುನಾವಣೆ ತರಬೇತಿ ಪಡೆದರು.

ಹೆಚ್ಚುವರಿ ಜಿಲ್ಲಾಧಿಕಾರಿ ಮಹಾದೇವಪ್ಪ ಮುರಗಿ, ತಹಸೀಲ್ದಾರ ಮಂಜುಳಾ ನಾಯಕ, ಇಓ ನೀಲಗಂಗಾ ಬಬಲಾದ, ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಹಂಗರಗಿ, ಚುನಾವಣೆ ಶಿರಸ್ತೆದಾರ ಆರ್.ಬಿ.ಮೂಗಿ, ರವಿ ಮಡಿವಾಳರ, ಕೆವಿಕೆ ಮುಖ್ಯಸ್ಥ ಶಿವಶಂಕರಮೂರ್ತಿ, ಕ್ಷೇತ್ರಶಿಕ್ಷಣಾಧಿಕಾರಿ ಟಿ.ಎಸ್. ಅಲಗೂರ , ಶಿರಸ್ತೆದಾರ ಬಸವರಾಜ ರಾಹೂರ ಮತ್ತಿತರಿದ್ದರು.

### ಶ್ರೀ ಜಗದಾರಾಧ್ಯ ಜಯಶಾಂತಲಿಂಗೇಶ್ವರ ಜಾತ್ರಾ ಮಹೋತ್ಸವಕ್ಕೆ ಚಾಲನೆ । ಜೀವನಜಾಗೃತಿ ಸಂಗೋಷ್ಠಿ

# ಮನಷ್ಯನ ಜೀವನ ಭಗವಂತನ ಬಳುವಳಿ :ಜಾಲಹಳ್ಳಿ ಶ್ರೀ




**ಉದಯರಶ್ಮಿ ನ್ಯೂಸ್**

ಕಲಕೇರಿ: ಮನಷ್ಯನ ಜೀವನ ಭಗವಂತನ ಬಳುವಳಿಯಾಗಿದ್ದು, ಬದುಕಿನುದ್ದಕ್ಕೂ ಸತ್ಯ ನ್ಯಾಯ ನೀತಿಯ ಪರಿಪಾಲನೆಯೊಂದಿಗೆ ಗುರುಗಳ ಮಾರ್ಗದರ್ಶನದಲ್ಲಿ ಜೀವನ ಜಾಗೃತಿಗೊಳಿಸಿಕೊಳ್ಳುವುದರೊಂದಿಗೆ ಸದಾ ಭಗವಂತನ ಚಿಂತನದಲ್ಲಿ ತೊಡಗಿಕೊಳ್ಳಬೇಕು, ನಮ್ಮ ಜೀವನವನ್ನು ಸುಂದರ ಮತ್ತು ಸಾರ್ಥ–ಕಗೊಳಿಸಿಕೊಳ್ಳುವುದೇ ಜೀವನದ ಪರಮ ಗುರಿಯಾಗಿರಬೇಕು ಎಂದು ಜಗದಾರಾಧ್ಯ ಜಯಶಾಂತಲಿಂಗೇಶ್ವರ ಶಿವಾಚಾರ್ಯರು ಹೇಳಿದರು.

ಗ್ರಾಮದ ಶ್ರೀ ಜಗದಾರಾಧ್ಯ ಜಯಶಾಂತಲಿಗೇಶ್ವರ ಮಹಾಸಂಸ್ಥಾನಮಠದಲ್ಲಿ ಜಾತ್ರಾ ಮಹೋತ್ಸವದ ಪ್ರಯುಕ್ತ ನಡೆದ ಜೀವನಜಾಗೃತಿ ಸಂಗೋಷ್ಠಿ ಕಾರ್ಯಕ್ರಮದ ಪಾವನ ಸಾನಿಧ್ಯವಹಿಸಿ ಅವರು ಮಾತನಾಡಿದರು.

ಹುಟ್ಟಿದಾಗ ಉಸಿರು ಇರುತ್ತದೆ ಆದರೆ ಹೆಸರು ಇರುವುದಿಲ್ಲ, ನಾವು ಸತ್ತಾಗ ಹೆಸರು ಇರುತ್ತದೆ ಆದರೆ ಉಸಿರು ಇರುವುದಿಲ್ಲ. ಈ ಉಸಿರು ಮತ್ತು ಹೆಸರಿನ ಮಧ್ಯದ ನಮ್ಮ ಅಲ್ಪ ಜೀವನದಲ್ಲಿ ನಮ್ಮ ಸುಂದರ ಕಾರ್ಯಗಳ ಮೂಲಕ ಶ್ರೇಷ್ಠ ಬದುಕು ನಮ್ಮದಾಗಿಸಿಕೊಳ್ಳಲು ಮುಂದಾಗಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮಕ್ಕೂ ಮುನ್ನ ಓಂಕಾರ ಧ್ವಜಾರೋಹಣ ನೆರವೇ–ರಿಸಿದ ಕಲಕೇರಿ ಹಿರೇಮಠದ ಸಿದ್ಧರಾಮ ಶಿವಾಚಾರ್ಯರು ಮತ್ತು ಜೀವನಜಾಗೃತಿ ಸಂಗೋಷ್ಠಿ ಕಾರ್ಯಕ್ರಮವನ್ನು ಉದ್ಘಾಟಿಸಿದ ಕೊಡೆಕಲ್ಲ ದುರುದುಂಡೇಶ್ವರ ವಿರಕ್ತಮಠದ ಶಿವಕುಮಾರ ಮಹಾಸ್ವಾಮಿಗಳು ಮಾತನಾಡಿ ಪ್ರಾಣಿ ಪಕ್ಷಿಗಳು ತನ್ನತನವನ್ನು ಮರೆತಿಲ್ಲ, ಆದರೆ ಮನುಷ್ಯ ಮಾತ್ರ ನಾ ಎಂಬ ಅಹಂಕಾರ, ಸ್ವಾರ್ಥ ತುಂಬಿಕೊಂಡು ಮನುಷ್ಯತ್ವವನ್ನು ಮರೆತಿದ್ದರಿಂದ ಆತನಲ್ಲಿರುವ ಅರಿಷಡ್‌ವರ್ಗಗಳ ವಿಕೃತ ಕಾರ್ಯಗಳಿಂದ ಆತನ ಜೀವನವನ್ನು ಹಾಳು ಮಾಡುತ್ತಿವೆ. ಹಾಗಾಗಿ ತನ್ನನ್ನು ತಾನರಿವುದೇ ಜೀವನದ ಉದ್ದೇಶವಾಗಿಸಿಕೊಂಡು, ಸಂಪತ್ತು ಅಧಿಕಾರ ಶಾಶ್ವತವಲ್ಲ ಎನ್ನುವ ಅರಿವು ನಮ್ಮಲ್ಲಿ ಸದಾ ಜಾಗೃತವಾಗಿಟ್ಟುಕೊಂಡು ಗುರುಗಳ ಮಾರ್ಗದರ್ಶನದಲ್ಲಿ ಸತ್ಯ ಧರ್ಮದ ನೆಲೆಗಟ್ಟಿನಲ್ಲಿ ಚಿಕಿತ್ಸಕ ಬುದ್ಧಿಯ ಮೂಲಕ ಜೀವನವನ್ನು ಅರಿತು ನಡೆದಾಗ ಜೀವನ ಸುಂದರವಾಗುತ್ತದೆ, ಅಲ್ಲದೇ ಜೀವಾತ್ಮ ಪರಮಾತ್ಮನಾಗಲು ಸಾಧ್ಯ ಎಂದು ಹೇಳಿದರು.

ಬೆಳಿಗ್ಗೆ ಶ್ರೀ ಜಗದಾರಾಧ್ಯ ಜಯಶಾಂತಲಿಗೇಶ್ವರ ಶಿವಲಿಂಗಕ್ಕೆ ರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ ಹಾಗೂ ಮಹಾಮಂಗಳಾರತಿ ನಂತರ ಗಣಾರಾಧನೆ ಹಾಗೂ ಅನ್ನಸಂತರ್ಪಣೆ ನಡೆಯಿತು, ಗದ್ದುಗೆಮಠದ ಮಡಿವಾಳೇಶ್ವರ ಶಿವಾಚಾರ್ಯರು, ಜಾಲಹಳ್ಳಿಮಠದ ರವಿಕಿರಣ ದೇವರು, ಚಬನೂರ ಹಿರೇಮಠದ ರಾಮಲಿಂಗಯ್ಯ ಮಹಾಸ್ವಾಮಿಗಳು ಸೇರಿದಂತೆ ಇತರರು ಇದ್ದರು

# ಯುಗಾದಿ ಸಂಭ್ರಮ ಹೆಚ್ಚಿಸಿದ ಮಳೆ ; ಹಲವೆಡೆ ವರ್ಷಧಾರೆ



ಬೆಂಗಳೂರು: ಕರ್ನಾಟಕದ ಜನರಿಗೆ ಯುಗಾದಿ ಹಬ್ಬ ಡಬಲ್ ಖುಷಿ ತಂದಿದೆ. ಒಂದು ಕಡೆ ಹಬ್ಬದ ಸಂಭ್ರಮವಾದರೆ ಮತ್ತೊಂದೆಡೆ ಹಬ್ಬದ ದಿನವೇ ರಾಜ್ಯದ ಹಲವು ಕಡೆಗಳಲ್ಲಿ ಉತ್ತಮ ಮಳೆಯಾಗಿದೆ.

ಕಳೆದ ಕೆಲವು ದಿನಗಳಿಂದ ರಾಜ್ಯದ ಹಲವು ಜಿಲ್ಲೆಗಳಲ್ಲಿ ಚದು–ರಿದಂತೆ ಮಳೆಯಾಗುತ್ತಿದೆ. ಕೊಡಗು ಜಿಲ್ಲೆಯಲ್ಲಿ ಕಳೆದ ಮೂರು ದಿನಗಳು ಅಲ್ಲಲ್ಲಿ ಉತ್ತಮವಾಗಿ ಮಳೆಯಾಗಿದ್ದು ಸಂತಸ ಹೆಚ್ಚಿಸಿತ್ತು. ಯುಗಾದಿ ಬಳಿಕ ರಾಜ್ಯದಲ್ಲಿ ಮಳೆಯಾಗುತ್ತದೆ ಎಂದು ಹವಾಮಾನ ಇಲಾಖೆ ಕೂಡ ಹೇಳಿತ್ತು, ಅದರಂತೆ ಹಲವು ಜಿಲ್ಲೆಗಳಲ್ಲಿ ಹಬ್ಬದ ದಿನ ಮಳೆಯಾಗಿದೆ.

ಹಾವೇರಿ ಜಿಲ್ಲೆಯಲ್ಲಿ ಹಬ್ಬದ ದಿನ ಮಳೆಯಾಗಿದ್ದು ಖುಷಿ ಹೆಚ್ಚಿಸಿದೆ. ಶಿವಮೊಗ್ಗ ಜಿಲ್ಲೆಯಲ್ಲೂ ಕೂಡ ಯುಗಾದಿ ಹಬ್ಬದ ದಿನ ಮಳೆ ಸುರಿದಿದ್ದು, ಜನರ ಖುಷಿ ಡಬಲ್ ಆಗಿದೆ. ಶಿಕಾರಿಪುರ ತಾಲೂಕಿನ ಅಡಗಂಟಿ ಗ್ರಾಮದಲ್ಲಿ ಮಳೆಯಾಗಿದೆ.

ವಿಜಯನಗರ ಜಿಲ್ಲೆಯಲ್ಲೂ ಮಳೆಯಾಗಿದ್ದು, ಜನರ ಖುಷಿ ಹೆಚ್ಚಾಗಿದೆ. ಉಚ್ಚಂಗಮ್ಮ ಜಾತ್ರೆ ವೇಳೆ ಕೆಲ ಕಾಲ ಮಳೆಯಾಗಿದ್ದು, ಬಿಸಿಲಿನಿಂದ ಬೇಸತ್ತಿದ್ದ ಜನ ಮಳೆ ಬಂದ ತಕ್ಷಣ ಖುಷಿಯಿಂದ ಕುಣಿದು ಕುಪ್ಪಳಿಸಿದ್ದಾರೆ. ದಾವಣಗೆರೆ ಜಿಲ್ಲೆಯ ಚನ್ನಪಟ್ಟಣ ತಾಲೂಕಿನ ಬಸವಪಟ್ಟಣದಲ್ಲಿ ಕೂಡ ಮಳೆಯಾಗಿದೆ.

**ಏಪ್ರಿಲ್ 15ರವರೆಗೆ ರಾಜ್ಯದಲ್ಲಿ ಮಳೆ**

ರಾಜ್ಯದಲ್ಲಿ ಏಪ್ರಿಲ್ 15ರವರೆಗೆ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದಕ್ಷಿಣ ಒಳನಾಡು ಮತ್ತು ಉತ್ತರ ಒಳನಾಡಿನ ಹಲವು ಕಡೆಗಳಲ್ಲಿ ಚದುರಿದಂತೆ ಮಳೆಯಾಗಲಿದೆ ಎಂದು ಮುನ್ಸೂಚನೆಯಲ್ಲಿ ತಿಳಿಸಿದೆ.

ಬೆಂಗಳೂರು ನಗರದಲ್ಲಿ ಕೂಡ ಈ ವಾರಾಂತ್ಯದಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಏಪ್ರಿಲ್ 13 ಅಥವಾ 14 ರಂದು ಬೆಂಗಳೂ–ರಿಗೆ ಮಳೆಯಾಗುವ ಸಾಧ್ಯತೆ ಇದೆ ಎಂದು ಹೇಳಿದೆ. ಬಿಸಿಲಿನಿಂದ ಹೈರಾಣಾಗಿರುವ ಬೆಂಗಳೂರು ನಗರದ ಜನತೆಗೆ ಇದು ಸಂತಸದ ಸುದ್ದಿಯಾಗಿದೆ.

ಕೊಡಗು, ಚಿಕ್ಕಮಗಳೂರು, ಮೈಸೂರು, ಸೇರಿದಂತೆ ಹಲವು ಕಡೆಗಳಲ್ಲಿ ಈಗಾಗಲೆ ಮಳೆಯಾಗುತ್ತಿತ್ತು. ಹಬ್ಬದ ದಿನ ದಾವಣಗೆರೆ, ಹಾವೇರಿ, ಚಿತ್ರದುರ್ಗ, ವಿಜಯನಗರ ಜಿಲ್ಲೆಗಳಲ್ಲಿ ಮಳೆಯಾಗಿದೆ. ಇದೇ ರೀತಿ ಮಳೆ ಮುಂದುವರೆಯಲಿ ಎಂದು ರಾಜ್ಯದ ಜನ ಪ್ರಾರ್ಥನೆ ಮಾಡುತ್ತಿದ್ದಾರೆ.

# ಕ್ರೋಧಿ ನಾಮ ಸಂವತ್ಸರದಲ್ಲಿ ನಿಮ್ಮ ಭವಿಷ್ಯ ಹೇಗಿರಬಹುದು?




**ಉದಯರಶ್ಮಿ ದಿನಪತ್ರಿಕೆ**

ರಾಹು ಕೇತು ರಾಶಿ ಫಲ ಶನಿ ಗುರು ಚಲನೆಗಳ ಬಗ್ಗೆ ನನಗೆ ಏನು ತಿಳಿದಿಲ್ಲ. ಆದರೆ ಈ ಪ್ರಕೃತಿಯ, ಈ ಸಮಾಜದ, ಜೀವರಾಶಿಗಳ ಚಲನೆಯನ್ನು – ವರ್ತನೆಯನ್ನು ನೋಡಿ ಅನುಭವದ ಅರಿವಿನ ಒಂದು ಸಲಹಾ ರೂಪದ ಅನಿಸಿಕೆ..

ನಿಮ್ಮ ವಯಸ್ಸು 0 ರಿಂದ 10 ರ ವರೆಗೆ ಇದ್ದು ನೀವು ಹುಡುಗನೋ, ಹುಡುಗಿಯೋ ಏನೇ ಆಗಿರಿ ನಿಮ್ಮ ಭವಿಷ್ಯ ನಿಮ್ಮ ಹಿಡಿತದಲ್ಲಿ ಇರುವುದಿಲ್ಲ. ನಿಮ್ಮ ಪೋಷಕರ ಮಾನಸಿಕ, ದೈಹಿಕ, ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ಪ್ರಾದೇಶಿಕ ಒಟ್ಟಾರೆ ಅವರ ಪರಿಸ್ಥಿತಿ ಅವಲಂಬಿಸಿ ಅದು ರೂಪಗೊಳ್ಳುತ್ತದೆ. ನೀವು ತಲೆಕೆಡಿಸಿಕೊಳ್ಳಬೇಡಿ ಮತ್ತು ನಿಮ್ಮ ಭವಿಷ್ಯ ಪೋಷಕರ ಒಡಲಿನಲ್ಲಿ ಜೀವ ತಳೆಯುವ ಸಮಯವದು..

ನಿಮ್ಮ ವಯಸ್ಸು 10 ರಿಂದ 20 ಆಗಿದ್ದು, ನೀವು ಯುವಕರಾಗಿದ್ದರೆ ನಿಮ್ಮ ಬದುಕು ಮೊಳಕೆಯೊಡೆಯುವುದು ಈಗಲೇ..

ನಿಮ್ಮ ದೇಹ ಮತ್ತು ಮನಸ್ಸು ಚಿಗುರುತ್ತಾ ಯೌವ್ವನದೆಡೆಗೆ ಕಾಲಿಡತೊಡಗುತ್ತದೆ. ಮೀಸೆ, ಗಡ್ಡ ಬೆಳೆದು ಧ್ವನಿ ಒಡೆದು ಬದಲಾವಣೆಯಾಗತೊಡಗುತ್ತದೆ. ಸಾಮಾನ್ಯವಾಗಿ ಹೊರ ಜಗತ್ತಿಗೆ ಹೆಚ್ಚು ತೆರೆದುಕೊಂಡು ಅಪ್ಪ ಅಮ್ಮನ ಮೇಲೆ ಸ್ವಲ್ಪ ಸ್ವಲ್ಪವೇ ಅಸಹನೆ ಅಸಮಾಧಾನ ಪ್ರಾರಂಭವಾಗುತ್ತದೆ. ಅನೇಕರು ಕೆಟ್ಟ ಚಟಗಳ ದಾಸರಾಗುವ ಸಾಧ್ಯತೆ ಹೆಚ್ಚು. ಅಪರೂಪಕ್ಕೆ ಕೆಲವರು ವಿವಿಧ ಕ್ಷೇತ್ರಗಳಲ್ಲಿ ಸಾಧನೆಯ ಕಡೆ ಮುಖ ಮಾಡುತ್ತಾರೆ. ಅವಕಾಶಗಳ ಆಯ್ಕೆ ನಿಮ್ಮ ಕೈಯಲ್ಲಿರುತ್ತದೆ. ದಯವಿಟ್ಟು ಸ್ವಲ್ಪ ತಾಳ್ಮೆಯಿಂದ ಯೋಚಿಸಿ ನಿರ್ಧಾರ ತೆಗೆದುಕೊಳ್ಳಿ..

ಹಾಗೆಯೇ 10 ರಿಂದ 20 ವಯಸ್ಸಿನ ಯುವತಿಯರಾಗಿದ್ದರೆ, ನಿಮ್ಮಲ್ಲೂ ಸಾಕಷ್ಟು ದೈಹಿಕ – ಮಾನಸಿಕ ಬದಲಾವಣೆಗಳಾಗುತ್ತದೆ. ಯುವಕರಿಗಿಂತ ಹೆಚ್ಚಿನ ಒತ್ತಡ ಮತ್ತು ಜವಾಬ್ದಾರಿ ಹೇರಲ್ಪಡುತ್ತದೆ. ಈ ಆಧು–ನಿಕ ಕಾಲದಲ್ಲೂ ನಿಮ್ಮ ಮೇಲೆ ಒಂದು ಹೆಚ್ಚಿನ ಕಣ್ಗಾವಲು ಮತ್ತು ನಿಯಂತ್ರಣ ಇರುತ್ತದೆ. ಆದರೆ ಈಗ ನಿಮಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಹೆಚ್ಚಿನ ಅವಕಾಶಗಳು ದೊರೆಯುತ್ತದೆ. ಈ ಆಧುನಿಕ ಕಾಲದಲ್ಲಿ ನೀವು ಸಹ ದಾರಿ ತಪ್ಪುವ ಅವಕಾಶ ಮತ್ತು ಸಾಧ್ಯತೆಗಳು ಸಾಕಷ್ಟಿವೆ. ಅದರಿಂದ ನಿಮ್ಮ ಭವಿಷ್ಯ ಕಷ್ಟಕ್ಕೆ ಸಿಲುಕಬಹುದು. ಸ್ವಲ್ಪ ಎಚ್ಚರಿಕೆಯಿಂದ ಇರುವುದು ಒಳ್ಳೆಯದು..

ನಿಮ್ಮ ವಯಸ್ಸು 20 ರಿಂದ 30 ಇದ್ದರೆ, ಗಂಡು ಮತ್ತು ಹೆಣ್ಣು ಇಬ್ಬರಿಗೂ ಬದುಕಿನ ಮುಖ್ಯ ರಸ್ತೆ ಹಿಡಿಯುವ ಸಮಯವಿದು..



ಒಂದಷ್ಟು ಜನ ಶಿಕ್ಷಣ ಮುಂದುವ–ರಿಸುವ ಆಕಾಂಕ್ಷೆ, ಇನ್ನೊಂದಿಷ್ಟು ಜನ ಉದ್ಯೋಗ ಹಿಡಿಯುವ ಒತ್ತಡ, ಮತ್ತೊಂದಷ್ಟು ಜನರಿಗೆ ಅವರ ತಂದೆ ತಾಯಿಯರ ಆರೋಗ್ಯದ ಸಮಸ್ಯೆ, ಮಗದೊಂದಿಷ್ಟು ಜನರಿಗೆ ಮದುವೆಯ ಬಗ್ಗೆ ಯೋಚನೆ ಹೀಗೆ ತುಂಬಾ ಚಟುವಟಿಕೆಗಳ ಕಾಲವಿದು.





ನಿರ್ಧಾರಗಳ ತಾಕಲಾಟದಲ್ಲಿ ಎಚ್ಚರಿಕೆ ಅಗತ್ಯ. ಹಿತೈಷಿಗಳ ಮಾರ್ಗದರ್ಶನ ಪಡೆಯುವುದು ಸೂಕ್ತ. ನಿಮ್ಮ ನಿರ್ಧಾರ ನಿಮ್ಮ ಮುಂದಿನ ಜೀವನ ರೂಪಿಸುತ್ತದೆ, ಅದು ಸದಾ ನೆನಪಿರಲಿ..

ನೀವು 30 ರಿಂದ 40 ವಯಸ್ಸಿನ ಹೆಂಗಸು ಅಥವಾ ಗಂಡಸು ಆಗಿದ್ದರೆ ಇಬ್ಬರಿಗೂ ಬದುಕು ಚಲಿಸಲು ಪ್ರಾರಂಭವಾದಂತೆ, ಅದರ ಆಳ ಅಗಲಗಳು ಮತ್ತು ವಾಸ್ತವ ಅರಿವಾಗತೊಡಗುತ್ತದೆ. ಕೆಲವರು ನೆಮ್ಮದಿಯ ಬದುಕನ್ನು, ಮತ್ತೆ ಕೆಲವರು ಅತೃಪ್ತಿಯ ಜೀವನವನ್ನು ಅನುಭವಿಸುವ ಕಾಲವಿದು. ಮಕ್ಕಳ ಶಿಕ್ಷಣ ಮತ್ತು ಸ್ವಂತ ಮನೆಯ ಕನಸು, ಜೀವನದಲ್ಲಿ ಸೆಟಲ್ ಆಗುವ ಪ್ರಯತ್ನ ಸಾಗುತ್ತದೆ. ಸಾಂಸಾರಿಕ ಕಲಹಗಳು ಕುಡಿಯೊಡೆಯುವ ಸಾಧ್ಯತೆಯ ಪಕ್ವಕಾಲವಿದು. ವಿವೇಚನೆ ಅಗತ್ಯ ಅಥವಾ ಬಂದದ್ದನ್ನು ಸ್ವೀಕರಿಸಬೇಕು. ನಿಮ್ಮ ಬದುಕಿನ ನಿಮ್ಮ ನಿರ್ಧಾರಗಳು, ಅದರ ಮುಂದಿನ ಪರಿಣಾಮ ಮತ್ತು ಫಲಿತಾಂಶಗಳ ದೃಷ್ಟಿಯಿಂದ ಮಹತ್ವದ ಸಮಯವಿದು. ನಿಮ್ಮ ಜ್ಞಾನ, ಅಜ್ಞಾನ, ಅಹಂಕಾರ, ದೂರದೃಷ್ಟಿಗೆ ಈ ಸಮಯ ಒಂದು ಸವಾಲು..

40 ರಿಂದ 50 ವಯಸ್ಸಿನ ಪುರುಷ ಮತ್ತು ಮಹಿಳೆಯರಾಗಿದ್ದರೆ ಇಬ್ಬರಿಗೂ ಸಣ್ಣದಾಗಿ ಮಾನಸಿಕ ಮತ್ತು ದೈಹಿಕ ಆರೋಗ್ಯದ ಸಮಸ್ಯೆಗಳು ಕಾಡತೊಡಗುತ್ತವೆ. ಇಲ್ಲಿ ಮುಖ್ಯವಾಗಿ ನಿಮ್ಮ ಮಕ್ಕಳ ಉನ್ನತ ವಿದ್ಯಾಭ್ಯಾಸ, ಅವರ ಗುಣ ನಡತೆಗಳು ಕೆಲವರಿಗೆ ಸಂತೋಷವನ್ನು, ಮತ್ತೆ ಕೆಲವ–ರಿಗೆ ಆತಂಕವನ್ನು ತಂದೊಡ್ಡುತ್ತದೆ. ತಂದೆ ತಾಯಿ ಮಕ್ಕಳ ನಡುವೆ ಚರ್ಚೆ, ವಾಗ್ವಾದಗಳು, ಕೆಲವು ಕಡೆ ಹೊಡೆದಾಟಗಳು ಸಹ ಆಗುವ ಸಂಭವವಿರುತ್ತದೆ. ಈ ವಯಸ್ಸಿನಲ್ಲಿ ನಿಮ್ಮ ತಂದೆತಾಯಿಯರು ಸಹ ಸುಮಾರು 60/70 ವಯಸ್ಸು ದಾಟುವುದರಿಂದ ಅವರ ಅನಾರೋಗ್ಯ ಅಥವಾ ಅಗಲುವಿಕೆ ಸಹ ಹೊಡೆತ ಕೊಡುತ್ತದೆ. ಬದುಕಿನ ಬಹುತೇಕ ಅಗ್ನಿ ಪರೀಕ್ಷೆಗಳು ಈ ಹಂತದಲ್ಲಿ ಎದುರಾಗುತ್ತವೆ. ಇದನ್ನು ಯಶಸ್ವಿಯಾಗಿ ನಿಭಾಯಿಸುವುದರಲ್ಲಿ ನಿಮ್ಮ ಯಶಸ್ಸು ಅಥವಾ ಸೋಲು ಅಡಗಿದೆ. ನಿಮ್ಮ ಪ್ರಬುದ್ಧತೆಯ ಪ್ರದರ್ಶನಕ್ಕೆ ಬಹು ದೊಡ್ಡ ವೇದಿಕೆಯಿದು..

50 ರಿಂದ 60 ವಯಸ್ಸಾಗಿದ್ದರೆ ಇಬ್ಬರಿಗೂ ನಿಮ್ಮ ಜವಾಬ್ದಾರಿಗಳನ್ನು ಮಕ್ಕಳಿಗೆ ವರ್ಗಾಯಿಸುವ ಕಾಲ ಅಥವಾ ಮಕ್ಕಳೇ ನಿಮ್ಮ ಜವಾಬ್ದಾರಿ ಇಳಿಸುವ ಸಮಯ. ಮಕ್ಕಳ ಮದುವೆ, ಉದ್ಯೋಗ, ಅವರುಗಳು ನಿಮ್ಮಿಂದ ದೂರವಾಗುವ ಅನಿವಾರ್ಯತೆ, ಆಗಾಗ ಕಾಡುವ ಸಾವಿನ ಭಯ, ಅನಾರೋಗ್ಯದ ಸಂದರ್ಭದಲ್ಲಿ ಹಣದ ಚಿಂತೆ, ಸ್ವಂತದವರಿಂದ ನಿರ್ಲಕ್ಷ್ಯಕ್ಕೆ ಒಳಗಾಗುವ ನೋವು, ಎಲ್ಲವೂ ಈ ಹಂತದಲ್ಲಿ ಅನುಭವವಾತೊಡಗುತ್ತದೆ. ಒಟ್ಟು ಕುಟುಂಬ ಬೇರೆ ಬೇರೆಯಾಗುವ ಸಾಧ್ಯತೆ ಹೆಚ್ಚು.

ಬದುಕಿನ ನಿಜವಾದ ಸಾರ್ಥಕತೆ ಅಥವಾ ವಿಫಲತೆಗಳನ್ನು ಲೆಕ್ಕ ಹಾಕುವ ಮನಸ್ಥಿತಿಯಿದು. ಪಾಲಿಗೆ ಬಂದದ್ದನ್ನು ಸ್ವೀಕರಿಸುವ ಮನೋಭಾವ ಒಳ್ಳೆಯದು ಅಥವಾ ಹೊಂದಾಣಿಕೆಯಾಗದೆ ಧೈರ್ಯದಿಂದ ಬದುಕನ್ನು ಎದುರಿಸುವ ಆಯ್ಕೆ ನಿಮ್ಮ ಕೈಯಲ್ಲಿರುತ್ತದೆ..

ಸಾಮಾನ್ಯ ಜನರಿಗೆ 60 ರ ನಂತರದ ಬದುಕು ಬಹುತೇಕ ನಿವೃತ್ತಿಯ, ವಿಶ್ರಾಂತ ಬಯಸುವ ಕಾಲವಾಗಿರುತ್ತದೆ. ಆದರೆ ಕೆಲವು ಶ್ರಮ ಜೀವಿಗಳಿಗೆ, ಮಹತ್ವಾಕಾಂಕ್ಷಿಗಳಿಗೆ, ಅರಿವಿನ ಅನುಭವದಲ್ಲಿ ಮಿಂದು ಬಂದವರಿಗೆ 60 ರ ನಂತರವೇ ನಿಜವಾದ ಬದುಕು ವೇಗ ಪಡೆದುಕೊಳ್ಳುತ್ತದೆ. ರಾಜಕೀಯ, ಸಾಹಿತ್ಯ, ಸಮಾಜ ಸೇವೆ ಅಥವಾ ಆಧ್ಯಾತ್ಮದ ಚಟುವಟಿಕೆಗಳನ್ನು ಹಾಗೂ ತಮ್ಮ ಹಿಂದಿನ ವ್ಯಾವಹಾರಿಕ ವೃತ್ತಿಯನ್ನು ಉತ್ತುಂಗಕ್ಕೆ ತೆಗೆದುಕೊಂಡು ಹೋಗಲು ಪ್ರಯತ್ನಿಸಬಹುದು. ಇದು ಅವರವರ ಆರೋಗ್ಯವನ್ನು ಮತ್ತು ಮಾನಸಿಕ ವ್ಯಕ್ತಿತ್ವವನ್ನು ಅವಲಂಬಿಸಿರುತ್ತದೆ..

ಇದು ಭಾರತದ ಸಾಮಾನ್ಯರ ಜನಜೀವನದ ವಾರ್ಷಿಕ ಭವಿಷ್ಯದ ಒಂದು ಊಹಾತ್ಮಕ ನೋಟ. ಇದು ಒಬ್ಬರಿಂದ ಇನ್ನೊಬ್ಬರಿಗೆ ಭಿನ್ನವಾಗಿರುತ್ತದೆ. ಇಲ್ಲಿ ಉಲ್ಲೇಖಿಸಿದ ವಿಷಯಗಳಿಗೆ ವಿರುದ್ಧವಾಗಿಯೂ ಕೆಲವು ಘಟನೆಗಳು ನಡೆಯಬಹುದು. ಅಪಘಾತ, ಅನಾರೋಗ್ಯ, ದುರಾದೃಷ್ಟ, ಪ್ರಕೃತಿಯ ವಿಕೋಪ, ಆ ಪ್ರದೇಶದ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಪರಿಸ್ಥಿತಿ ಅವಲಂಬಿಸಿ ಬದುಕು ವಿವಿಧ ಅನಿರೀಕ್ಷಿತ ತಿರುವುಗಳನ್ನು ಪಡೆಯಬಹುದು.

ಇದನ್ನೇ ಕೆಲವು ಜ್ಯೋತಿಷಿಗಳು ಆಕರ್ಷಕವಾಗಿ ಮತ್ತು ಜೀವನೋಪಾಯದ ಮಾರ್ಗವಾಗಿ ಹಾಗು ಕ್ರಮಬದ್ಧವಾಗಿ ಹೇಳುತ್ತಾರೆ. ಇದರಲ್ಲಿ ಬಹಳಷ್ಟು ನಿಜವಾಗಬಹುದು. ಆದರೆ ಅವರು ಸೂಚಿಸುವ ಪರಿಹಾರಗಳು ಮಾತ್ರ ಅಗೋಚರ ಶಕ್ತಿಯ ಅಥವಾ ಮೂಡ ನಂಬಿಕೆಗಳ ಮೇಲೆ ಅವಲಂಬಿತವಾಗಿರುವ ಸಾಧ್ಯತೆ ಇರುತ್ತದೆ..

ಆದ್ದರಿಂದ ಇಲ್ಲಿ ತುಂಬಾ ಎಚ್ಚರಿಕೆ ಅಗತ್ಯ. ಒಂದು ವೇಳೆ ನಿಮಗೆ ಜ್ಯೋತಿಷ್ಯದ ಮೇಲೆ ನಂಬಿಕೆ ಇದ್ದರೂ ಯಾವುದೇ ಮುಖ್ಯ ನಿರ್ಧಾರ ತೆಗೆದುಕೊಳ್ಳುವಾಗ ಎಲ್ಲಾ ವಿಷಯಗಳನ್ನು 360 ಡಿಗ್ರಿ ದೃಷ್ಟಿಕೋನದಿಂದ, ನಿಮ್ಮ ಸ್ವಂತ ಬುದ್ಧಿಶಕ್ತಿಯಿಂದ ಯೋಚಿಸಿ ತೀರ್ಮಾನ ತೆಗೆದುಕೊಳ್ಳಿ. ಪಶ್ಚಾತ್ತಾಪಕ್ಕೆ ಅತ್ಯಂತ ಕಡಿಮೆ ಅವಕಾಶ ಕೊಡಿ. ಇದು ಅನುಭವದ ಒಂದು ಸಹಜ ಅಭಿವ್ಯಕ್ತಿ ಮಾತ್ರ..

ಯುಗಾದಿ ಹಬ್ಬದ ಶುಭಾಶಯಗಳು..
ಎಲ್ಲರಿಗೂ ಒಳ್ಳೆಯದಾಗಲಿ.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR